# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –306 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 02–07–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 306 | RNI No: KARKAN/2023/88462 | KA/SK/CTA-874/2024-2026 | Chitradurga | Date:02-07-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕೆ ಇಲಾಖಾವಾರು ಅಗತ್ಯ ಕ್ರಮವಹಿಸಿ 2

ರೋಚಕತೆಗಿಂತ ರಚನಾತ್ಮಕತೆ ಕಡೆಗೆ ಗಮನಹರಿಸಿ: ಮಂಜುನಾಥ್ 3

ಮಾಧ್ಯಮಗಳು ನನ್ನನ್ನೂ ಸೇರಿ ಅಧಿಕಾರಸ್ಥರ ಓಲೈಕೆ ಮಾಡಬಾರದು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕಳುವು ಪ್ರಕರಣದಲ್ಲಿ ಕಾಂಗ್ರೆಸ್ ಕಾರ್ಮಿಕ ಕಾರ್ಯದರ್ಶಿ ಭಾಗಿ ಸೈಯದ್ ಅಕ್ಬರ್ ಉಚ್ಚಾಟನೆ

» ಚಿತ್ರದುರ್ಗ

ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಸಂಘಟನಾ ಕಾರ್ಯದರ್ಶಿ ಸೈಯದ್ ಅಕ್ಬರ್ ಇವರನ್ನು ಉಚ್ಚಾಟಿಸಲಾಗಿದೆ ಎಂದು ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಸೈಯದ್ ಮೊಹಿದ್ದಿನ್(ಚೋಟು) ತಿಳಿಸಿದ್ದಾರೆ. ಪಕ್ಷದ ಚಿಹ್ನೆಯನ್ನು ಕಾರಿನ ಮೇಲೆ ಬಳಸಿಕೊಂಡು ತಿರುಗಾಡುತ್ತಿರುವ ಸೈಯದ್ ಅಕ್ಬರ್ ಕಳುವು ಪ್ರಕರಣದಲ್ಲಿ ಭಾಗಿಯಾಗಿರುವುದು ಸಾಕ್ಷಿ ಸಮೇತ ಸಿಕ್ಕಿರುವುದರಿಂದ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಕೆ.ಪುಟ್ಟಸ್ವಾಮಿಗೌಡರ ಸೂಚನೆಯಂತೆ ಸಂಘಟನಾ ಕಾರ್ಯದರ್ಶಿ ಸ್ಥಾನದಿಂದ ವಜಾಗೊಳಿಸಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಅಧ್ಯಕ್ಷ ಸೈಯದ್ ಮೊಹಿದ್ದೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸುಧಾರಿತ ಈರುಳ್ಳಿ ಬೆಳೆಯ ಉತ್ಪಾದನಾ ತಾಂತ್ರಿಕತೆ ಕುರಿತು ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಜುಲೈ 03ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ ಸುಧಾರಿತ ಈರುಳ್ಳಿ ಬೆಳೆಯ ಉತ್ಪಾದನಾ ತಾಂತ್ರಿಕತೆಗಳ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯ ಸಹಾಯಕ ಪ್ರಾಧ್ಯಾಪಕ (ತರಕಾರಿ) ಡಾ. ಪ್ರಕಾಶ್ ಕೆರೂರೆ ಅವರು ಈರುಳ್ಳಿ ಬೆಳೆಯಲ್ಲಿ ಅನುಸರಿಸಬೇಕಾದ ಸುಧಾರಿತ ಬೇಸಾಯ ಕ್ರಮಗಳ ಕುರಿತು ಮಾಹಿತಿ ನೀಡುವರು. ಬಬ್ಬೂರು ಕೃಷಿ ವಿಜ್ಞಾನ ಕೇಂದ್ರದ ಕೀಟಶಾಸ್ತ್ರಜ್ಞ ಡಾ ಟಿ ರುದ್ರಮುನಿ ಅವರು, ಈರುಳ್ಳಿ ಬೆಳೆಯಲ್ಲಿ ಬರುವ ಪ್ರಮುಖ ರೋಗ ಮತ್ತು ಕೀಟಗಳ ನಿರ್ವಹಣೆ ಕುರಿತು ಮಾಹಿತಿ ನೀಡುವರು. ತದನಂತರ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಈರುಳ್ಳಿ ತಾಕಿಗೆ ಕ್ಷೇತ್ರ ಭೇಟಿಯನ್ನು ಮಾಡಲಾಗುವುದು.

ಆದ ಪ್ರಯುಕ್ತ ಆಸಕ್ತ 50 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು 8277931058 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ಈ ತರಬೇತಿಯ ಸದುಪಯೋಗ ಪಡೆಯಬೇಕು. ಮೊದಲು ನೋಂದಾವಣಿ ಮಾಡಿಕೊಂಡ 50 ರೈತಭಾಂದವರು ಫ್ರೂಟ್ಸ್ ಐಡಿ (ಎಫ್.ಐಡಿ) ಅಥವಾ ಆಧಾರ್ ಕಾರ್ಡನೊಂದಿಗೆ ತರಬೇತಿಗೆ ಹಾಜರಾಗಬೇಕು ಎಂದು ಬಬ್ಬೂರು ಜಿಲ್ಲಾ ಕೃಷಿ ತರಬೇತಿ ಕೇಂದ್ರ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಹೇಳಿದರು.

### ವಿಕಲಚೇತನ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ವಿಕಲಚೇತನರ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿನ ವಿದ್ಯಾರ್ಥಿ ವೇತನಕ್ಕೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಶದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲಾ ವ್ಯಾಪ್ತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮೆಟ್ರಿಕ್ ನಂತರದ ವಿಕಲಚೇತನ ವಿದ್ಯಾರ್ಥಿಗಳು ವೆಬ್‌ಸೈಟ್ https://ssp.postmetric.karnataka.gov.in/post_sa/signin.aspx ಹಾಗೂ ಮೆಟ್ರಿಕ್ ಪೂರ್ವ ವಿಕಲಚೇತನ ವಿದ್ಯಾರ್ಥಿಗಳು ವೆಬ್‌ಸೈಟ್ https://ssp.postmetric.karnataka.gov.in/ssppre ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ತಾಲೂಕು ವಿವಿದ್ದೋದ್ದೇಶ ಪುನರ್ವಸತಿ ಹಾಗೂ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಬೇಕು. ಮಾಹಿತಿಗಾಗಿ ಚಿತ್ರದುರ್ಗ 9880821934, ಚಳ್ಳಕೆರೆ 9611266930, ಹಿರಿಯೂರು 9902888901, ಹೊಳಲ್ಕೆರೆ 9740030227, ಹೊಸದುರ್ಗ 9741829990, ಮೊಳಕಾಲ್ಮೂರು 9742725576 ತಾಲೂಕು ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ ಕರೆ ಮಾಡಬಹುದು. ಜಿಲ್ಲಾ ಕಚೇರಿ ದೂ: 08194–235284 ಗೆ ಸಂಪರ್ಕಿಸಬಹುದು. ವಿಕಲಚೇತನರ ಕಲ್ಯಾಣ ಇಲಾಖೆ ಕಚೇರಿ ಭೇಟಿ ನೀಡಬಹುದು ಎಂದು ಜಿಲ್ಲಾ ವಿಕಲಚೇತನ ಕಲ್ಯಾಣಾಧಿಕಾರಿ ವೈಶಾಲಿ.ಜೆ ತಿಳಿಸಿದ್ದಾರೆ.

# ಜುಲೈ 05ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ–3

## ಜಿಲ್ಲೆಯಲ್ಲಿ 24 ಪರೀಕ್ಷಾ ಕೇಂದ್ರ –7453 ವಿದ್ಯಾರ್ಥಿಗಳು –ಪರೀಕ್ಷಾ ಪಾವಿತ್ರತೆ ಕಾಪಾಡಿ: ಎಡಿಸಿ

» ಚಿತ್ರದುರ್ಗ



ಪರೀಕ್ಷಾ ಗೌಪ್ಯತೆ ಹಾಗೂ ಪಾವಿತ್ರತೆಗೆ ತೊಂದರೆಯಾಗದಂತೆ ಎಸ್.ಎಸ್.ಎಲ್.ಸಿ ಪರೀಕ್ಷೆ–3 ನಿಯೋಜಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಮನ್ವಯದಿಂದ ಕಾರ್ಯ ನಿರ್ವಹಿಸುವ ಮೂಲಕ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದೇ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಎಸ್.ಎಸ್.ಎಲ್.ಸಿ ಪರೀಕ್ಷೆ–3 ಸಂಬಂಧ ಜರುಗಿದ ಪೂರ್ವ ಸಿದ್ಧತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಮಾರ್ಗದರ್ಶಿ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಮಂಡಳಿಯಿಂದ ಸರಬರಾಜು ಆಗುವ ಪ್ರಶ್ನೆ ಪತ್ರಿಕೆಗಳನ್ನು ಸಂಗ್ರಹಿಸಿಡುವ ತಾಲೂಕು ಖಜಾನೆಗಳಲ್ಲಿ ಹೆಚ್ಚಿನ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು. ಪರೀಕ್ಷೆಯ ಪಾವಿತ್ರತೆ ಕಾಪಾಡಲು ವೆಬ್ ಕಾಸ್ಟಿಂಗ್ ಘಟಕ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಲು ಅಗತ್ಯ ಕ್ರಮವಹಿಸಬೇಕು ಎಂದು ಹೇಳಿದರು.

24 ಪರೀಕ್ಷಾ ಕೇಂದ್ರ 7453 ವಿದ್ಯಾರ್ಥಿಗಳು: ಇದೇ ಜುಲೈ 05 ರಿಂದ 11 ರವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆ–3 ನಡೆಯಲಿದೆ. ಜುಲೈ 05 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ಪ್ರಥಮ ಭಾಷೆ, ಜುಲೈ 07ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ವಿಜ್ಞಾನ, ಜುಲೈ 08ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ದ್ವಿತೀಯ ಭಾಷೆ, ಜುಲೈ 09ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ಗಣಿತ, ಜುಲೈ 10ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ರವರೆಗೆ ತೃತೀಯ ಭಾಷೆ ಮತ್ತು ಬೆಳಿಗ್ಗೆ 10 ರಿಂದ ಮಧ್ಯಾಹ್ನ 12.15 ರವರೆಗೆ ಎನ್‌ಎಸ್‌ಕ್ಯೂಎಫ್ ವಿಷಯಗಳು, ಜುಲೈ 11ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.15 ರವರೆಗೆ ಸಮಾಜ ವಿಜ್ಞಾನ ವಿಷಯದ ಪರೀಕ್ಷೆ ನಡೆಯಲಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ–3ಗೆ 7453 ವಿದ್ಯಾರ್ಥಿಗಳು ನೊಂದಣಿಯಾಗಿದ್ದು, ಚಳ್ಳಕೆರೆ–06 ಪರೀಕ್ಷಾ ಕೇಂದ್ರಗಳು, ಚಿತ್ರದುರ್ಗ–07 ಪರೀಕ್ಷಾ ಕೇಂದ್ರಗಳು, ಹಿರಿಯೂರು–04 ಪರೀಕ್ಷಾ ಕೇಂದ್ರಗಳು, ಹೊಳಲ್ಕೆರೆ–02 ಪರೀಕ್ಷಾ ಕೇಂದ್ರಗಳು, ಹೊಸದುರ್ಗ–03 ಪರೀಕ್ಷಾ ಕೇಂದ್ರಗಳು ಹಾಗೂ ಮೊಳಕಾಲ್ಮುರು–02 ಪರೀಕ್ಷಾ ಕೇಂದ್ರಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 24 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಎಲ್ಲ ಪರೀಕ್ಷಾ ಕೇಂದ್ರಗಳಿಗೆ ಈಗಾಗಲೇ ಮುಖ್ಯ ಅಧೀಕ್ಷಕರು ಮತ್ತು ಕಸ್ಟೋಡಿಯನ್ ಅವರನ್ನು ನೇಮಕ ಮಾಡಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಣಾಧಿಕಾರಿ ಎನ್.ಆರ್.ತಿಪ್ಪೇಸ್ವಾಮಿ ಸಭೆಗೆ ಮಾಹಿತಿ ನೀಡಿದರು.

ಪರೀಕ್ಷೆಯ ಪಾವಿತ್ರತೆ ಕಾಪಾಡಲು ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನಲ್ಲಿ ಕೇಂದ್ರಿಕೃತವೀಕ್ಷಣಾಘಟಕವನ್ನುಸ್ಥಾಪಿಸಿದೆ. ಇಲ್ಲಿಗೆ ನೋಡಲ್ ಅಧಿಕಾರಿಗಳು ಮತ್ತು ವೀಕ್ಷಕರ ತಂಡವನ್ನು ರಚಿಸಲಾಗಿದೆ. ತಾಂತ್ರಿಕ ಸಹಾಯಕರನ್ನು ಸಹ ನೇಮಕ ಮಾಡಲಾಗಿದೆ. ಈ ತಂಡಕ್ಕೆ ಲ್ಯಾಪ್‌ಟಾಪ್, ಕಂಪ್ಯೂಟರ್‌ಗಳನ್ನು ಒದಗಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಎಲ್ಲ ಪರೀಕ್ಷಾ ಕೊಠಡಿಗಳಲ್ಲಿಯೂ ಸಿಸಿಟಿವಿ ಲಭ್ಯತೆ ಇರುತ್ತದೆ ಎಂದು ತಿಳಿಸಿದರು. ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆಗಳನ್ನು ವಿತರಿಸಲು ಹಾಗೂ ಉತ್ತರ ಪತ್ರಿಕೆಗಳನ್ನು ಹಿಂಪಡೆದು ತಾಲ್ಲೂಕು ಹಂತಕ್ಕೆ ತಲುಪಿಸಲು ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಆಯಾ ತಾಲ್ಲೂಕಿನ ಸಂಖ್ಯೆಗನುಗುಣವಾಗಿ ಮಾರ್ಗಾಧಿಕಾರಿಗಳಿಗೆ ವಾಹನಗಳನ್ನು ಒದಗಿಸಲು ಕೋರಿದರು. ಮಾರ್ಗಾಧಿಕಾರಿಗಳ ವಾಹನಗಳಿಗೆ ಸಂಬಂಧಿಸಿದ ತಾಲ್ಲೂಕು ಖಜಾನೆಯಿಂದ ಪರೀಕ್ಷಾ ಕೇಂದ್ರಗಳಿಗೆ ತೆರಳುವವರೆಗೆ ಹಾಗೂ ಉತ್ತಮ ಪತ್ರಿಕೆಗಳನ್ನು ತಾಲ್ಲೂಕು ಹಂತಕ್ಕೆ ಹಿಂದಿರುಗಿಸುವವರೆಗೆ ಸಶಸ್ತ್ರ ಪೊಲೀಸ್ ಸಿಬ್ಬಂದಿಯನ್ನುನಿಯೋಜಿಸಲು ಕೋರಿದರು.

ಜಿಲ್ಲೆಯ 24 ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಲ್ಲಿ 4 ರಿಂದ 5 ಪರೀಕ್ಷಾ ಕೇಂದ್ರಗಳಿಗೆ ಒಬ್ಬರಂತೆ ಜಿಲ್ಲಾ ಹಂತದ, ತಾಲ್ಲೂಕು ಹಂತದ ಅಧಿಕಾರಿಗಳನ್ನು ವೀಕ್ಷಕರನ್ನಾಗಿ ನೇಮಕ ಮಾಡಬೇಕು. ಎಲ್ಲ ಪರೀಕ್ಷಾ ಕೇಂದ್ರಗಳಿಗೂ ಪೊಲೀಸ್ ಸಿಬ್ಬಂದಿಯನ್ನು ಪರೀಕ್ಷೆ ನಡೆಯುವ ನಿಯೋಜಿಸಲು ತಿಳಿಸಿದರು.

ಪರೀಕ್ಷಾ ಪಾವಿತ್ರತೆ ಕಾಪಾಡಲು ಹಾಗೂ ಪರೀಕ್ಷಾ ಸುರಕ್ಷತಾ ಹಿತದೃಷ್ಠಿಯಿಂದ ಪರೀಕ್ಷೆ ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಪ್ರದೇಶವನ್ನು 144 ಸೆಕ್ಷನ್ ಪ್ರಕಾರ ನಿಷೇಧಿತ ಪ್ರದೇಶ ಎಂದು ಘೋಷಣೆ ಮಾಡಬೇಕು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ ಅವರು, ಪರೀಕ್ಷಾ ನಡೆಯುವ ದಿನದಂದು ವಿದ್ಯುತ್ ಅಡಚಣೆಯಾಗದಂತೆ ಬೆಸ್ಕಾಂ ಕಾರ್ಯಪಾಲಕ ಅಭಿಯಂತರರಿಗೆ ಕೋರಿದರು. ಸಭೆಯಲ್ಲಿ ಡಯಟ್ ಪ್ರಾಂಶುಪಾಲ ನಾಸಿರುದ್ದಿನ್, ಶಿಕ್ಷಣಾಧಿಕಾರಿ ಸಿದ್ದಪ್ಪ, ಆರು ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಘೆ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಪರೀಕ್ಷಾ ಕೇಂದ್ರ ಮುಖ್ಯಸ್ಥರು ಇದ್ದರು.

ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ 2024–25ನೇ ಸಾಲಿನ ಚಿನ್ನದ ಪದಕ ರ್ಯಾಂಕ್ ವಿಜೇತರ ಪಟ್ಟಿಬಿಡುಗಡೆ

## ಚಳ್ಳಕೆರೆ ಇಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿನಿಗೆ ಮೊದಲ ರ್ಯಾಂಕ್ ಗೌರವ : ಶಾಸಕ ಟಿ.ರಘುಮೂರ್ತಿ ಅಭಿನಂದನೆ

» ಚಳ್ಳಕೆರೆ







ಕರ್ನಾಟಕ ರಾಜ್ಯದ ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಬಂಗಾರದ ಪದಕ ಹಾಗೂ ರ್ಯಾಂಕ್ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಬಿಡುಗಡೆಗೊಳಿಸಿದ್ದು, ಇದೇ ಮೊಟ್ಟಮೊದಲ ಬಾರಿಗೆ ಚಳ್ಳಕೆರೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಆಟೋಮೊಬೈಲ್ ವಿಭಾಗದ ವಿದ್ಯಾರ್ಥಿನಿ ಚಿನ್ನದ ಪದಕದೊಂದಿಗೆ ಮೊದಲರ್ಯಾಂಕ್ ಪಡೆದರಲ್ಲದೆ, ಇನ್ನೂ ಇಬ್ಬರು ವಿದ್ಯಾರ್ಥಿಗಳು ಕ್ರಮವಾಗಿ ಮೂರು ಮತ್ತು ನಾಲ್ಕನೇ ರ್ಯಾಂಕ್ ಪಡೆದಿದ್ದಾರೆಂದು ಕಾಲೇಜು ಪ್ರಾಂಶುಪಾಲ ಎಂ.ಎಂ.ಬೆನಾಲ್ ತಿಳಿಸಿ, ರ್ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ರಿಜಿಸ್ಟ್ರಾರ್ ಎನ್.ಟಿ.ಶ್ರೀನಿವಾಸ ಮಾಹಿತಿ ನೀಡಿದ್ದು, ಜುಲೈ4ರ ಶುಕ್ರವಾರ ವಿವಿಯಲ್ಲಿ ನಡೆಯುವ 25ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ರಾಜ್ಯಪಾಲರು, ವಿಶ್ವವಿದ್ಯಾಲಯದ ಚಾನ್ಸಿಲರ್ ಥಾವರಚಂದ್ ಗೆಹಲೋಟ್ ಪದವಿಪ್ರಧಾನದ ಜೊತೆಗೆ ಚಿನ್ನದ ಪದಕವನ್ನು ವಿತರಿಸುವರು ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಉನ್ನತ್ತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ವೈಸ್‌ಚಾನ್ಸಲರ್ ಎಸ್.ವಿದ್ಯಾಶಂಕರ್, ರಿಜಿಸ್ಟ್ರಾರ್ ಪ್ರೊ.ಬಿ.ಇ.ರಂಗಸ್ವಾಮಿ ಭಾಗವಹಿಸುವರು.


ಪುಟ ↘ 2


## ಅಣಜಿಯ ಪೋರ ಗಿನ್ನಿಸ್ ದಾಖಲೆ



ದಾವಣಗೆರೆ: ತಾಲೂಕಿನ ಅಣಜಿ ಗ್ರಾಮದ ಎರಡೂವರೆ ವರ್ಷದ ಪುಟ್ಟ ಪೋರ ರನ್ನಿಂಗ್ ನಲ್ಲಿ ಗಿನ್ನಿಸ್ ವಿಶ್ವ ದಾಖಲೆಯನ್ನು ಸೃಷ್ಟಿಸಿ ನಿಬ್ಬೆರಗು ಮೂಡಿಸಿದ್ದಾನೆ. ಅಣಜಿ ಗ್ರಾಮದ ಕರಾಟೆ ಸಂತೋಷ್ ಅವರ ಪುತ್ರ ಕುಶಲ್ ರಾಜ್ ಎಂಬ ಎರಡೂವರೆ ವರ್ಷದ ಪೋರ 50 ಮೀಟರ್ ರನ್ನಿಂಗ್ ನಲ್ಲಿ 19:17 ಸೆಕೆಂಡ್ ನಲ್ಲಿ ಪೂರ್ಣಗೊಳಿಸಿ ಗಿನ್ನಿಸ್ ವಿಶ್ವ ದಾಖಲೆ ಬರೆದಿದ್ದಾನೆ. ಆ ಮೂಲಕ ಈ ಹಿಂದೆ ತಮಿಳುನಾಡಿನ ಧ್ರುವ ಎಲ್.ಎಸ್ ಅವರ 25:47 ಸೆಕೆಂಡ್ ನಲ್ಲಿ ಪೂರ್ಣಗೊಳಿಸಿದ್ದರು. ಈ ದಾಖಲೆಯನ್ನು ಕರ್ನಾಟಕದ ದಾವಣಗೆರೆ ತಾಲೂಕಿನ ಅಣಜಿ ಗ್ರಾಮದ ಎರಡೂವರೆ ವರ್ಷದ ಕುಶಲ್ ರಾಜ್ ಹಿಂದೆ ಹಾಕಿ ಹೊಸ ದಾಖಲೆಯನ್ನು ಸೃಷ್ಟಿಸಿದ್ದಾನೆ. ರಾಜ್ಯ ಹಾಗೂ ಜಿಲ್ಲೆಗೆ ಕೀರ್ತಿ ತಂದ ಈ ಪೋರನಿಗೆ ಎಸ್.ಟಿ. ಮೋರ್ಚಾದ ರಾಜ್ಯ ಉಪಾಧ್ಯಕ್ಷರಾದ ಶ್ರೀನಿವಾಸ್ ದಾಸಕರಿಯಪ್ಪ ಅಭಿನಂದನೆ ಸಲ್ಲಿಸಿ ಪ್ರೋತ್ಸಾಹಿಸಿದ್ದಾರೆ.

**ಪ್ರಮುಖ ಸುದ್ದಿ**

# ತಳಕು ಹೋಬಳಿಯಲ್ಲಿ 8 ಕೋಟಿ ವೆಚ್ಚದಲ್ಲಿ 3 ರಸ್ತೆಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಎನ್.ವೈ.ಜಿ

» ಚಳ್ಳಕೆರೆ



ತಳಕು ಹೋಬಳಿಯಲ್ಲಿ 8ಕೋಟಿವೆಚ್ಚದಲ್ಲಿ ಮೂರುರಸ್ತೆಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಎನ್.ವೈ.ಗೋಪಾಲಕೃಷ್ಣ. ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರವ್ಯಾಪ್ತಿಯ ತಳಕು ಹೋಬಳಿಯ ಬೇಡರೆಡ್ಡಿಹಳ್ಳಿ, ಬಂಜಿಗೆರೆ, ಚಿಕ್ಕಹಳ್ಳಿ ಸಂಪರ್ಕ ರಸ್ತೆಯ ನಿರ್ಮಾಣ ಕಾರ್ಯದ ಭೂಮಿಪೂಜೆಯನ್ನು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ನೆರವೇರಿಸಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಸ್ತೆಯ ಅಭಿವೃದ್ದಿಯೂ ಸೇರಿದಂತೆ ಮೂಲಸೌಲಭ್ಯಗಳಾದ ಚರಂಡಿ, ಕುಡಿಯುವ ನೀರು ಇನ್ನಿತರ ವ್ಯವಸ್ಥೆಗೆ ಸರ್ಕಾರದಿಂದ ಅನುದಾನಕ್ಕಾಗಿ ಮನವಿ ಮಾಡಿದ್ದು ಹಂತ, ಹಂತವಾಗಿ ಅನುದಾನವನ್ನು ನೀಡಲಾಗುತ್ತಿದೆ. ಪ್ರಸ್ತುತ ಒಟ್ಟು ಮೂರು ರಸ್ತೆಗಳ ಅಭಿವೃದ್ದಿಗೆ 8 ಕೋಟಿ ಹಣವನ್ನು ಬಿಡುಗಡೆಗೊಳಿಸಿದ್ದು ಲೋಕೋಪಯೋಗಿ ಇಲಾಖೆ ತ್ವರಿತಗತಿಯಲ್ಲಿ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲಿದೆ ಎಂದು ತಿಳಿಸಿದರು. ಆಂಧ್ರ ಪ್ರದೇಶದ ಗಡಿಗೆ ಸೇರ್ಪಡೆಯಾಗುವ ತಳಕು–ಬೇಡರೆಡ್ಡಿಹಳ್ಳಿ ಸಂಪರ್ಕ ರಸ್ತೆಯನ್ನು ಒಟ್ಟು 6ಕೋಟಿ ವೆಚ್ಚದಲ್ಲಿ, ಬಂಜಿಗೆರೆ–ಬೇಡರೆಡ್ಡಿಹಳ್ಳಿ ರಸ್ತೆ 2ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುವುದು. ಒಟ್ಟು 8ಕೋಟಿ ವೆಚ್ಚದಲ್ಲಿ ಮೂರು ರಸ್ತೆಗಳ ಕಾಮಗಾರಿ ಲೋಕೋಪಯೋಗಿ ಇಲಾಖೆಗೆ ನೀಡಲಾಗಿದೆ ಎಂದರು. ಭೂಮಿಪೂಜೆಯನ್ನು ನೆರವೇರಿಸಿದ್ದು ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದರು.

ತಾಲ್ಲೂಕು ಕೆಡಿಪಿ ಸದಸ್ಯ ಎಸ್.ಪಿ.ವಿಶ್ವನಾಥರೆಡ್ಡಿ, ತಳಕು ವಿಎಸ್‌ಎಸ್ ಅಧ್ಯಕ್ಷ ಟಿಎಟಿ ಕುಮಾರ್, ಬೇಡರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಅರುಣ್, ಸದಸ್ಯ ತಿಮ್ಮಯ್ಯ, ಪೃಥ್ವಿರಾಜ್, ಅನಂತರೆಡ್ಡಿ, ದಾಸರೆಡ್ಡಿ, ಬಿ.ಆರ್.ತಿಮ್ಮಾರೆಡ್ಡಿ, ಜಿ.ಬಾಲರೆಡ್ಡಿ, ತಿಪ್ಪೇಸ್ವಾಮಿ, ಬಾಬು, ಎಸ್.ತಿಪ್ಪೇಸ್ವಾಮಿ, ಎಚ್.ಚಂದ್ರಣ್ಣ, ಅಶೋಕ್, ಜಿ.ಪಿ.ನಾಗೇಶ್‌ರೆಡ್ಡಿ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕೆ ಇಲಾಖಾವಾರು ಅಗತ್ಯ ಕ್ರಮವಹಿಸಲು ಡಿಸಿ ಗಂಗಾಧರಸ್ವಾಮಿ ಸೂಚನೆ

» **ದಾವಣಗೆರೆ**

ದಾವಣಗೆರೆ ನಗರ, ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ಹಾಗೂ ಪರಿಸರ ಸ್ನೇಹಿ ಜಿಲ್ಲೆಯಾಗಿಸಲು ಇಲಾಖಾವಾರು ವಿವಿಧ ರೀತಿಯ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಪರಿಸರ ಸಂರಕ್ಷಣೆ ಮತ್ತು ಪ್ಲಾಸ್ಟಿಕ್ ನಿಷೇಧ ಕುರಿತು ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ನಗರದ ವಿವಿದೆಡೆ ಉತ್ಪತ್ತಿಯಾಗುವ ಘನತ್ಯಾಜ್ಯ, ಆಸ್ಪತ್ರೆಗಳಲ್ಲಿ ಉತ್ಪತ್ತಿಯಾಗುವ ಬಯೋ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಮರ್ಪಕವಾಗಿ ವಿಲೇವಾರಿ ಮಾಡುವ ಮೂಲಕ ಪರಿಸರ ಸಂರಕ್ಷಿಸಬೇಕು. ಅಲ್ಲದೇ ಜಿಲ್ಲಾದ್ಯಂತ ಏಕ ಬಳಕೆಯ ಪ್ಲಾಸ್ಟಿಕ್‌ನ್ನು ಸಂಪೂರ್ಣವಾಗಿ ನಿಷೇಧಿಸಿ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾದ್ಯಂತ ಪರಿಸರ ಸಂರಕ್ಷಿಸಿ, ಉಳಿಸಲು ಪ್ರತಿ ಶಾಲೆಗೆ ದೊಡ್ಡ ಬ್ಯಾಗ್ ನೀಡಬೇಕು. ಅವುಗಳಲ್ಲಿ ಕಸ, ತ್ಯಾಜ್ಯ ಸಂಗ್ರಹಿಸಿ ಪಾಲಿಕೆ ಅಥವಾ ಸ್ಥಳೀಯ ಸಂಸ್ಥೆಗಳಿಗೆ ನೀಡಬೇಕು ಎಂದು ಸೂಚಿಸಿದರು. ಪರಿಸರ ದಿನಾಚರಣೆ ಅಂಗವಾಗಿ ಸಂರಕ್ಷಣೆಗೆ ಮತ್ತು ರಕ್ಷಣೆಗೆ ಪ್ರತಿಯೊಂದು ಮಗುವು ಎರಡು ಸಸಿ ನೆಟ್ಟು ಪೋಷಣೆ ಮಾಡಬೇಕು.




ಮಾದರಿ ವಾರ್ಡ್; ಪರಿಸರ ಸಂರಕ್ಷಣೆ ಮತ್ತು ಪ್ಲಾಸ್ಟಿಕ್ ಬಳಕೆಯನ್ನು ತಡೆಗಟ್ಟಲು ದಾವಣಗೆರೆ ನಗರದಲ್ಲಿ ಮಾದರಿ ವಾರ್ಡ್ ಆಯ್ಕೆ ಮಾಡಿಕೊಳ್ಳುವ ಮೂಲಕ ಇಲ್ಲಿ ಪ್ಲಾಸ್ಟಿಕ್ ಬಳಕೆ ಶೂನ್ಯಕ್ಕೆ ತರುವುದು ಮತ್ತು ಪರಿಸರ ಸಂರಕ್ಷಣೆ ಮಾಡಲು ಕ್ರಮ ವಹಿಸಲಾಗುತ್ತದೆ. ಪ್ರತಿ ಮನೆಯಿಂದ ವೈಜ್ಞಾನಿಕವಾಗಿ ಕಸ ಸಂಗ್ರಹ ಮಾಡಲಾಗುತ್ತದೆ ಎಂದರು.

ಹಾಳೆ ಉಳಿದ ನೋಟ್‌ಬುಕ್ ಸಂಗ್ರಹ; ಶಾಲಾ, ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಬರೆಯಲು ಉಪಯೋಗಿಸುವ ನೋಟ್ ಬುಕ್‌ಗಳಲ್ಲಿ ಕೆಲವು ಪುಟಗಳ ಹಾಳೆಯನ್ನು ಮಾತ್ರ ಉಪಯೋಗಿಸಿ ಉಳಿದ ಹಾಳೆಯಲ್ಲಿ ಬರೆಯದೇ ಉಳಿಸಲಾಗಿರುತ್ತದೆ. ಇಂತಹ ನೋಟ್ ಪುಸ್ತಕ, ಡೈರಿಗಳ ಸಂಗ್ರಹ ಮಾಡುವ ಮೂಲಕ ಅದರಲ್ಲಿ ಉಳಿಕೆ ಹಾಳೆಗಳನ್ನು ಸಂಗ್ರಹಿಸಿ ಬೈಡಿಂಗ್ ಮಾಡಿಸುವ ಮೂಲಕ ಮರುಬಳಕೆಗೆ ಚಿಂತನೆ ನಡೆಸಲಾಗಿದೆ.

ಇದರಿಂದ ಕಾಗದದ ತಯಾರಿಕೆಗೆ ಬಳಕೆ ಮಾಡುವ ಪ್ರಾಕೃತಿಕ ಸಂಪತ್ತನ್ನು ಉಳಿಸಿದಂತಾಗುತ್ತದೆಂಬುಲ್ಲದೇ ವಿದ್ಯಾರ್ಥಿಗಳಿಗೆ ಈ ಬಗ್ಗೆ ಮನವರಿಕೆ ಮಾಡಿಕೊಟ್ಟಂತಾಗುತ್ತದೆ ಎಂದರು.

**ಮಾರುಕಟ್ಟೆಗಳಲ್ಲಿ ಪ್ಲಾಸ್ಟಿಕ್ ನಿಷೇಧ:** ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಹಾಗೂ ಇನ್ನಿತರೆ ಮಾರುಕಟ್ಟೆಗಳಲ್ಲಿ ಏಕ ಬಳಕೆ ಹಾಗೂ ಪರಿಸರಕ್ಕೆ ಹಾನಿಯುಂಟು ಮಾಡುವಂತಹ ಪ್ಲಾಸ್ಟಿಕ್‌ನ್ನು ಸಂಪೂರ್ಣವಾಗಿ ನಿರ್ಬಂಧಿಸಿ ನಿಷೇಧಿಸುವಂತೆ ಮಾರುಕಟ್ಟೆ ಸಮಿತಿ ಜಂಟಿ ನಿರ್ದೇಶಕರಿಗೆ ಸೂಕ್ತ ನಿರ್ದೇಶನ ನೀಡಿ ಆಯಾ ಇಲಾಖೆವಾರು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಂಪೂರ್ಣ ವರದಿಯನ್ನು ನೀಡಲು ಪರಿಸರ ಅಧಿಕಾರಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾದವ ವಿಠ್ಠಲ ರಾವ್ ಮಾತನಾಡಿ ಗ್ರಾಮೀಣ ಪ್ರದೇಶದಲ್ಲಿಯು ಮಾದರಿ ಪಂಚಾಯಿತಿಯನ್ನು ಆಯ್ಕೆ ಮಾಡಿಕೊಳ್ಳುವ ಮೂಲಕ ಅಲ್ಲಿ ಪ್ಲಾಸ್ಟಿಕ್ ನಿಷೇಧ ಸೇರಿದಂತೆ ಪರಿಸರ ಸಂರಕ್ಷಣೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಪೌರಾಯುಕ್ತೆ ರೇಣುಕಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್, ಡಿಡಿಪಿಐ ಕೊಟ್ರೇಶ್, ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


## ಫಾಸ್ಟ್ ನ್ಯೂಸ್


## ಚಳ್ಳಕೆರೆ ಇಂಜಿನಿಯರಿಂಗ್ ಕಾಲೇಜು ವಿದ್ಯಾರ್ಥಿನಿಗೆ ಮೊದಲ ರ್‍ಯಾಂಕ್ ಗೌರವ


» **ಮೊದಲ ಪುಟದಿಂದ**


ಆಟೋಮೊಬೈಲ್ ವಿಭಾಗದಲ್ಲಿ ಈ. ರಂಜಿತ ಆಟೋಮೊಬೈಲ್ ವಿಭಾಗದ ವಿಶ್ವವಿದ್ಯಾಲಯಕ್ಕೆ ಪ್ರಥಮ ರ್‍ಯಾಂಕ್ ಹಾಗೂ ಚಿನ್ನದ ಪದಕ, ಬೆಳಗಾವಿಯ ಚಿಕ್ಕೋಡಿಟಿ ವ್ಯಾಪ್ತಿಯ ಇಂಗಲಿ ಗ್ರಾಮದ ಅರ್ಚನ ಹರದಾರೆ ಮೂರನೇ ರ್‍ಯಾಂಕ್, ಚಿತ್ರದುರ್ಗ ತಾಲ್ಲೂಕಿನ ಮೇಗಳಹಳ್ಳಿ ಗ್ರಾಮದ ಬಿ.ಎಸ್ ದಿವ್ಯಾ ನಾಲ್ಕನೇ ರ್‍ಯಾಂಕ್ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿತಂದಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಪ್ರಾಂಶುಪಾಲರು ತಾಲ್ಲೂಕಿನ ನೇರಲಗುಂಟೆಯ ಮಗ್ಗವೃತ್ತಿಯ ಈಶ್ವರಪ್ಪ ಎಂಬುವವರ ಪುತ್ರಿ ಈ. ರಂಜಿತ ಆಟೋಮೊಬೈಲ್ ವಿಭಾಗದ ವಿಶ್ವವಿದ್ಯಾಲಯಕ್ಕೆ ಪ್ರಥಮ ರ್‍ಯಾಂಕ್ ಹಾಗೂ ಚಿನ್ನದ ಪದಕ ಪಡೆದಿದ್ದಾಳೆ. ಬೆಳಗಾವಿ ವಿಶ್ವವಿದ್ಯಾಲಯಮಟ್ಟದಲ್ಲಿ 2024–25ನೇ ಸಾಲಿನ ಮೊಟ್ಟಮೊದಲ ರ್‍ಯಾಂಕ್ ಇದಾಗಿದ್ದು, ಚಳ್ಳಕೆರೆ ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪಡೆದ ಮೊದಲರ್‍ಯಾಂಕ್ ಸಹ ಇದಾಗಿದೆ.

**ರ್‍ಯಾಂಕ್ ವಿಜೇತರಿಗೆ ಶಾಸಕರ ಅಭಿನಂದನೆ :** ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನ ಮೂವರು ವಿದ್ಯಾರ್ಥಿನಿಯರು ಕ್ರಮವಾಗಿ ಒಂದು, ಮೂರು ಮತ್ತು ನಾಲ್ಕನೇ ರ್‍ಯಾಂಕ್ ಪಡೆಯುವ ಮೂಲಕ ಕಾಲೇಜು ಹಾಗೂ ಜಿಲ್ಲೆಗೆ ಕೀರ್ತಿತಂದಿದ್ದು, ರ್‍ಯಾಂಕ್ ವಿಜೇತರನ್ನು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಅಭಿನಂದಿಸಿ, ಶುಭಹಾರೈಸಿದ್ದಾರೆ. ಕಾಲೇಜಿನ ಪ್ರಾಂಶುಪಾಲ ಎಂ.ಎಂ.ಬೆನಾಲ್ ಮತ್ತು ಸಿಬ್ಬಂದಿ ವರ್ಗವನ್ನು ಅಭಿನಂದಿಸಿದ್ದಾರೆ.

## ದೊಡ್ಡಕಿಟ್ಟದಹಳ್ಳಿ ವ್ಯಕ್ತಿ ಕಾಣೆ; ದೂರು ದಾಖಲು

» **ಹೊಸದುರ್ಗ**

ವ್ಯಕ್ತಿಯೊಬ್ಬ ಹೊಸದುರ್ಗ ಪಟ್ಟಣಕ್ಕೆ ಹೋಗಿ ಬರುತ್ತೇನೆಂದು 2025 ಮಾರ್ಚ್ 15ರಂದು ಮನೆಯಿಂದ ತೆರಳಿ, ಇದುವರೆಗೂ ಮನೆಗೆ ಹಿಂದಿರುಗಿಲ್ಲ. ಕಾಣೆಯಾಗಿರುವ ವ್ಯಕ್ತಿಯನ್ನು ತಾಲೂಕಿನ ಮಾಡದಕೆರೆ ಹೋಬಳಿಯ ದೊಡ್ಡ ಕಿಟ್ಟದಹಳ್ಳಿ ಗ್ರಾಮದ ಸಿದ್ದಪ್ಪ ತಂದೆ ಕೊಡಪ್ಪ (50) ಹೇಳಲಾಗಿದೆ. ಈತ ನಾಪತ್ತೆಯಾದ ದಿನದಿಂದಲೂ ಮನೆಯವರು ಸ್ನೇಹಿತರು, ಸಂಬಂಧಿಕರು, ಪರಿಚಯಸ್ಥರ ಮನೆಗಳಲ್ಲಿ ಹುಡುಕಾಡಿದರೂ ಪತ್ತೆಯಾಗಿಲ್ಲ. ಈತನ ಗುರುತಿನ ಚಹರೆಗಳು 5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಬಣ್ಣ, ಕನ್ನಡ ಭಾಷೆ ಮಾತನಾಡಲು ಬರುತ್ತದೆ. ಮನೆಯಿಂದ ಹೋಗಬೇಕಾದರೆ, ಕರಿ ಬಣ್ಣದ ಜರ್ಕಿನ್, ಬಿಳಿ ಬಣ್ಣದ ಅಂಗಿ ಮತ್ತು ಕಲರ್ ಪಂಚೆಯನ್ನು ಹಾಕಿಕೊಂಡಿದ್ದರೆಂದು ನಾಪತ್ತೆಯಾಗಿರುವ ವ್ಯಕ್ತಿಯ ಸಂಬಂಧಿಕರೊಬ್ಬರು ದೂರು ನೀಡಲಾಗಿದ್ದು, ಈ ಬಗ್ಗೆ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ವ್ಯಕ್ತಿಯ ಗುರುತು ಪತ್ತೆಯಾದರೆ, ಸ್ಥಳೀಯ ಪೊಲೀಸ್ ಠಾಣೆಗೆ ಮಾಹಿತಿ ನೀಡಲು ಕೋರಲಾಗಿದೆ.

## ತಾಲ್ಲೂಕು ವೀರಶೈವ ನೌಕರರ ಸಂಘದಿಂದ ಪ್ರತಿಭಾಪುರಸ್ಕಾರ ಜುಲೈ-6ರಂದು

» **ಚಳ್ಳಕೆರೆ**

ತಾಲ್ಲೂಕು ವೀರಶೈವ ಲಿಂಗಾಯಿತ ನೌಕರರ ಕ್ಷೇಮಾಭಿವೃದ್ಧಿ ಸಂಘ, ವೀರಶೈವ ಸಮಾಜಸೇವಾಸಂಘ, ವೀರಶೈವ ಸಂಘಟನೆಗಳ ಒಕ್ಕೂಟ ಸಂಯುಕ್ತಾಶ್ರಯದಲ್ಲಿ ಪ್ರತಿಭಾಪುರಸ್ಕಾರ ಹಾಗೂ ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮವನ್ನು ಜುಲೈ6ರ ಭಾನುವಾರ ಬೆಳಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ನೌಕರರ ಕ್ಷೇಮಾಭಿವೃದ್ಧಿಸಂಘದ ಅಧ್ಯಕ್ಷ ಸಿ.ಗುರುಸಿದ್ದಮೂರ್ತಿ ತಿಳಿಸಿದ್ದಾರೆ.

ಅವರು ಈ ಬಗ್ಗೆ ಮಾಹಿತಿ ನೀಡಿ, 2024–25ನೇ ಸಾಲಿನ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರದ ಜೊತೆಗೆ, ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮವಿದ್ದು ಚನ್ನಗಿರಿ ಕೇದಾರಶಾಖಾ ಹಿರೇಮಠದ ಕೇದಾರಲಿಂಗಶಿವಶಾಂತವೀರಶಿವಾಚಾರ್ಯಸ್ವಾಮಿಗಳುಕಾರ್ಯಕ್ರಮದ ದಿವ್ಯಸಾನಿಧ್ಯವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರವನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ನಡೆಸಿಕೊಡುವರು. ಚಿತ್ರದುರ್ಗ ಶಾಸಕಕೆ.ಸಿ.ವೀರೇಂದ್ರನಿವೃತ್ತನೌಕರರಿಗೆ ಸನ್ಮಾನ ಕಾರ್ಯಕ್ರಮ ನೆರವೇರಿಸಲಿದ್ದು, ವೀರಶೈವ ಸಮಾಜಸೇವಾ ಸಂಘದ ಅಧ್ಯಕ್ಷ ಕೆ.ಸಿ.ನಾಗರಾಜು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ಎಸ್.ರುದ್ರಮುನಿಯಪ್ಪ, ಎನ್.ಸತೀಶ್, ಎಚ್.ವಿ.ಪ್ರಸನ್ನಕುಮಾರ್, ವಂದನಬಸವರಾಜು, ದಲ್ಲಾಲರ ಸಂಘದ ಅಧ್ಯಕ್ಷ ಡಿ.ಎಂ.ತಿಪ್ಪೇಸ್ವಾಮಿ, ಟಿ.ಆರ್.ಕಿರಣ್‌ಶಂಕರ್, ಸಿ.ಎಸ್.ಜಯಪ್ರಕಾಶ್, ಪದ್ಮನಾಗರಾಜು, ವಿ.ಮಂಜುನಾಥ, ಡಾ.ಕೆ. ಎಂ.ಜಯಕುಮಾರ್, ಡಿ.ಜೆ.ಕಿರಣ್‌ಶಂಕರ್, ಟಿ.ಪ್ರಭುದೇವ್, ಎಚ್.ವಿ.ನಾಗರಾಜು, ಬಿ.ಎಸ್.ಶಿವಪುತ್ರಪ್ಪ, ಎಸ್.ಟಿ.ವಿಜಯ್, ನಗರಸಭೆ ನೂತನ ಅಧ್ಯಕ್ಷೆ ಶಿಲ್ಪಮುರುಳಿ, ಸದಸ್ಯರಾದ ಸಿ.ಎಂ.ವಿಶುಕುಮಾರ್, ಸಾವಿತ್ರಮ್ಮ, ನಾಮಿನಿ ಸದಸ್ಯ ನಟರಾಜ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

# ಎಚ್‌ಪಿಪಿಸಿ ಕಾಲೇಜಿನ 46ವರ್ಷ ನಂತರ ಸ್ನೇಹಮಿಲನ, ಗುರುವಂದನ ಕಾರ್ಯಕ್ರಮ

## ಬದುಕಿಗೆ ಭದ್ರಬುನಾದಿ ಒದಗಿಸಿದ ಶಿಕ್ಷಕರಿಗೆ ನಮಿಸಿದ ಶಿಷ್ಯವೃಂದ

» **ಚಳ್ಳಕೆರೆ**

ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ 1982–83ನೇ ಸಾಲಿನ ವಿದ್ಯಾರ್ಥಿಗಳಿಂದ ಸ್ನೇಹಮಿಲನ ಮತ್ತು ಗುರುವಂದನ ಕಾರ್ಯಕ್ರಮವನ್ನು ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕೃಷಿ ಇಲಾಖೆಯ ನಿವೃತ್ತ ಜಂಟಿನಿರ್ದೇಶಕ ಟಿ.ಎಚ್.ಈರಣ್ಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕಳೆದ ಸುಮಾರು 46 ವರ್ಷಗಳ ಹಿಂದೆ ಇದೇ ಕಾಲೇಜಿನಲ್ಲಿ ನಾವು ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿದ್ದು, ಇಂದು ಹಿರಿಯ ನಾಗರೀಕರಾಗಿ ಸೇವೆಯಿಂದ ನಿವೃತ್ತರಾದ ಅನೇಕರು ತಮ್ಮ ಗುರುಗಳು ಮತ್ತು ಅವರ ಸೇವೆಯನ್ನು ನೆನೆದು ಸ್ನೇಹಮಿಲನ ಮತ್ತು ಗುರುವಂದನಾ ಕಾರ್ಯಕ್ರಮದ ಮೂಲಕ ನಮ್ಮೆಲ್ಲರನ್ನೂ ಒಂದುಗೂಡಿಸಿದ್ದೀರಿ, ನಮ್ಮೆಲ್ಲರ ಬದುಕಿನಲ್ಲಿಈದಿನಅತ್ಯಂತಸರ್ವಶ್ರೇಷ್ಠದಿನವೆಂದು ಭಾವಿಸುವೆ. ಕಾರ್ಯಕ್ರಮವನ್ನು ಆಯೋಜಿಸಿದ ಎಲ್ಲಾ ಪ್ರಿಯ ಶಿಷ್ಯರಿಗೆ ಅಭಿನಂದನೆ ಸಲ್ಲಿಸುವೆ ಎಂದರು.

ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಎಸ್. ಮಂಜುನಾಥ ಮಾತನಾಡಿ, ಇಂತಹ



ಕಾರ್ಯಕ್ರಮಗಳಲ್ಲಿ ಭಾಗವಹಿಸುವುದೇ ಒಂದು ಅಭಿಮಾನದ ಸಂಗತಿ, ಅಂದಿನ ಶಿಕ್ಷಣದ ಪರಿಯನ್ನು ನೆನೆಸಿಕೊಂಡರೆ ಸಂತೋಷದ ಜೊತೆಗೆ ಚಿಂತನೆಯೂ ಆಗುತ್ತದೆ. ಕಾರಣ, ಯಾವುದೇ ಸೂಕ್ತಸೌಲಭ್ಯವಿಲ್ಲದಿದ್ದರೂ ಗುರುಗಳ ಮಾರ್ಗದರ್ಶನದಲ್ಲಿ ಕಷ್ಟಪಟ್ಟು ಓದಿ ನೌಕರಿಯನ್ನು ಪಡೆದು ನಾವೆಲ್ಲರೂ ಬದುಕುರೂಪಿಸಿಕೊಂಡಿದ್ದೇವೆ. ನಮ್ಮೆಲ್ಲರ ಸುಂದರ ಬದುಕಿನ ಹಿಂದೆ ಗುರುಗಳ ಕೊಡಿಗೆ ಅಪಾರ. ಇಡೀ ಜೀವಮಾನದಲ್ಲಿ ನಾವೆಂದೂ ಅವರ ಸೇವೆಯನ್ನು ಮರೆಯಲು ಸಾಧ್ಯವಿಲ್ಲ. ಇಂತಹ ಕಾರ್ಯಕ್ರಮದ ಮೂಲಕ ಗುರುಶಿಷ್ಯರ ಬಾಂಧ್ಯದ ಜೊತೆಗೆ ಗುರುಪರಂಪರೆಗೂ ಉತ್ತಮ ಮೌಲ್ಯಸಿಗುತ್ತದೆ ಎಂದರು.

ನಿವೃತ್ತ ಪ್ರಾಂಶುಪಾಲ ಡಾ.ಬಿ.ಪಿ.ಮೀರಸಾಬಿ ಹಳ್ಳಿಶಿವಣ್ಣ, ಎಂ.ವಿ.ಕೃಷ್ಣಯ್ಯ, ಗೋವಿಂದಪ್ಪ, ಎಚ್.ಎನ್.ರೇವತಿ, ಬಿ.ಪಿ.ವೀರೇಂದ್ರಕುಮಾರ್, ಎಸ್.ರುದ್ರಮುನಿ, ಡಾ.ಸಿ.ಶಿವಲಿಂಗಪ್ಪ, ಬಸವರಾಜುರವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿಮಂಜುಳಾ, ಪ್ರೊ. ಶಿವಕುಮಾರ್, ಸಿ.ಬಿ.ತಿಪ್ಪೇಸ್ವಾಮಿ, ಟಿ.ಕೆ. ತಿಪ್ಪೂರಾವ್, ನೀಲಕಂಠಪ್ಪ, ನಾಗಭೂಷಣ್, ನೀಲಕಂಠಪ್ಪ, ಮಹಲಿಂಗಪ್ಪ, ರೂಪಾ ಮುಂತಾದವರು ಭಾಗವಹಿಸಿದ್ದರು.

## ವೈ.ತಿಪ್ಪೇಸ್ವಾಮಿಗೆ ಹುಟ್ಟುಹಬ್ಬದ ಶುಭಾಶಯ ಕೋರಿದ ಅಭಿಮಾನಿಗಳು



» **ಚಳ್ಳಕೆರೆ**

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ವೈ.ತಿಪ್ಪೇಸ್ವಾಮಿ(ವೈಟಿಎಸ್) ರವರನ್ನು ಎಲ್‌ಐಸಿ ದುಗ್ಗಾವರರಂಗಸ್ವಾಮಿ ಅಭಿಮಾನಿಬಳಗ 55ವರ್ಷ ತುಂಬಿದ ಹಿನ್ನೆಲೆಯಲ್ಲಿ ಅವರ ನಿವಾಸದಲ್ಲೇ ಆತ್ಮೀಯವಾಗಿ ಸನ್ಮಾನಿಸಿ ಅಭಿನಂದಿಸಿದರು. ಬಳಗದ ಅಧ್ಯಕ್ಷ ಎಲ್‌ಐಸಿ ದುಗ್ಗಾವರರಂಗಸ್ವಾಮಿ ಮಾತನಾಡಿ, ವಕೀಲರ ವೈ.ತಿಪ್ಪೇಸ್ವಾಮಿ ಕಳೆದ ಸುಮಾರು 30 ವರ್ಷಗಳಿಂದ ವಕೀಲ ವೃತ್ತಿಯಲ್ಲಿ ನಿರತರಾಗಿದ್ದಾರೆ. ಹಲವಾರು ಸಂದರ್ಭಗಳಲ್ಲಿ ಬಡ ಕಕ್ಷಿದಾರರ ನೆರವಿಗೆ ದಾವಿಸಿದ್ದಾರೆ. ಪ್ರತಿಯೊಂದು ಹಂತದಲ್ಲೂ ಕಾನೂನು ಸಂರಕ್ಷಣೆಯ ಜೊತೆಗೆ ಕಕ್ಷಿದಾರರ ಹಿತವನ್ನು ಸಹ ರಕ್ಷಿಸುವ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡಿದ್ದಾರೆ. ಅವರ 55ನೇ ಹುಟ್ಟುಹಬ್ಬವನ್ನು ಆಚರಣೆ ಮಾಡಲಾಗುತ್ತಿದ್ದು, ನೂರಾರು ವರ್ಷ ಸುಖ, ಸಂತೋಷದಿಂದ ಬಾಳಲಿ ಎಂದು ಭಗವಂತನಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು. ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ವಕೀಲ ವೈ.ತಿಪ್ಪೇಸ್ವಾಮಿ, ನನ್ನ ವೃತ್ತಿಯಲ್ಲಿ ನಾನು ಹೆಸರುಗಳಿಸಿದ್ದರೆ ಅದಕ್ಕೆ ಇಲ್ಲಿರುವಸ್ನೇಹಿತರೇ ಕಾರಣ, ಹಣಕ್ಕಾಗಿ ಬೆಲೆಕೊಡದೆ ಉತ್ತಮ ಕಾರ್ಯಕ್ಕಾಗಿ ಗೌರವಕೊಟ್ಟರೆ ಮಾತ್ರ ನಮ್ಮ ಬದುಕು ಸಾರ್ಥಕವಾಗಲಿದೆ ಎಂದರು. ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎನ್.ಓಬಳೇಶ್, ಟಿ.ಗೋಪಿ, ಎಸ್.ಅಜ್ಜಪ್ಪ, ಬಿ.ಎಸ್.ಕಿರಣ್‌ಕುಮಾರ್, ಶಿವಪ್ಪ, ಟಿ.ರಂಗಸ್ವಾಮಿ, ಶಿವಯ್ಯ ಮುಂತಾದವರು ಉಪಸ್ಥಿತರಿದ್ದರು.

## ಶಾಲೆ ಆವರಣದಲ್ಲಿ 30 ಗಿಡಗಳನ್ನು ನೆಡಿಸಿ ಎಲ್ಲಾ ಪೋಷಕರಿಗೆ ಪರಿಸರ ಅರಿವು

**ಹೊಸದುರ್ಗ:** ತಾಲೂಕಿನ ಬಹುತೇಕ ಜನರಿಗೆ ಪರಿಚಯವಾದ ಗ್ರಾಮ ಗಲಬೇನಹಳ್ಳಿ. ಇಲ್ಲಿ ಸುಮರು 30 ಮನೆಗಳನ್ನು ಹೊದಿದ್ದು ಒಂದೇ ಸಮುದಾಯಕ್ಕೆ ಸೇರಿದ ಪರಿಶಿಷ್ಟ ಜಾತಿಗೆ ಸೇರಿದ ಜನರಿಂದ ಕೂಡಿದ ಗುಡ್ಡಗಾಡು ಪ್ರದೇಶ. ಸದರಿ ಗ್ರಾಮದಲ್ಲಿ ಇರುವ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಕಳೆದ ಸಾಲಿನಲ್ಲಿ ಕೇವಲ 6 ವಿದ್ಯಾರ್ಥಿಗಳಲ್ಲಿ ದಾಖಲಾತಿಯಿಂದ ಮುಚ್ಚುವ ಹಂತಕ್ಕೆ ಬಂದಿತ್ತು. ಆದರೆ ಅಲ್ಲಿಗೆ ವರ್ಗವಣೆಯಾಗಿ ಬಂದ ಶಿಕ್ಷಕರು, ಪೋಷಕರು ಮತ್ತೆ ಎಸ್ಡಿಎಂಸಿ ಅಧ್ಯಕ್ಷರ ಸಹಾಯದಿಂದ ಪ್ರಸಕ್ತ ವರ್ಷದ ದಾಖಲಾತಿಯಲ್ಲಿ ಹೆಚ್ಚು ಮಾಡಿ ಈಗ ಒಟ್ಟು 12 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದರೇ. ಇಲ್ಲಿ ಕೇವಲ 1 ಕೊಟಾಡಿ ಮಾತ್ರ ಇತ್ತು 2 ಜನ ಶಿಕ್ಷಕರು ಒಂದೆ ಕೊಠಡಿಯಲ್ಲಿ ಬೋಧನೆ ಮಾಡುತ್ತಿದ್ದರು.

ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಟ್ರಸ್ಟ್ ವತಿಯಿಂದ ಪರಿಸರ ಮಾಹಿತಿ ಕಾರ್ಯಕ್ರಮವನ್ನು ಇದೇ ಶಾಲೆ ಆವರಣದಲ್ಲಿ ಹಮ್ಮಿಕೊಂಡು ಶಾಲೆ ಆವರಣದಲ್ಲಿ 30 ಗಿಡಗಳನ್ನು ನೆಡಿಸಿ ಎಲ್ಲಾ ಪೋಷಕರಿಗೆ ಪರಿಸರ ಅರಿವನ್ನು ಮೂಡಿಸಲಾಯಿತು.



**ಪ್ರಮುಖ ಸುದ್ದಿ**

# ನಗರದಲ್ಲಿ ಅಖಿಲೇಶ್ ಯಾದವ್ ಹುಟ್ಟುಹಬ್ಬ ಆಚರಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸಮಾಜವಾದ ಪಾರ್ಟಿಯ ರಾಷ್ಟ್ರೀಯ ಅಧ್ಯಕ್ಷರಾದ ಅಖೀಲೇಶ್ ಯಾದವ್‌ರವರ 52ನೇ ಹುಟ್ಟು ಹಬ್ಬವನ್ನು ಸಮಾಜವಾದ ಪಾರ್ಟಿಯ ಚಿತ್ರದುರ್ಗ ಘಟಕದವತಿಯಿಂದ ಆಚರಿಸಲಾಯಿತು.

ಸಮಾಜವಾದ ಪಾರ್ಟಿಯ ಚಿತ್ರದುರ್ಗ ಘಟಕದ ಅಧ್ಯಕ್ಷರಾದ ಲಕ್ಷ್ಮೀಕಾಂತ ಮಾತನಾಡಿ, ಮುಖ್ಯಮಂತ್ರಿ ಯಾಗಿ ಅಖಿಲೇಶ್ ಯಾದವ್ ಅವರು ರಾಜ್ಯ ಮತ್ತು ಸಮಾಜವಾದಿ ಪಕ್ಷದಲ್ಲಿ ಅನೇಕ ಸುಧಾರಣೆಗಳನ್ನು ಪ್ರಾರಂಭಿಸಿದ್ದಾರೆ, ಇದು ಎರಡನ್ನೂ ಹೊಸ ರೂಪಕ್ಕೆ ತಂದಿದೆ. ಅವರು 'ಜನತಾ ದರ್ಬಾರ್' ಅನ್ನು ಪರಿಚಯಿಸಿದರು, ಅಲ್ಲಿ ಯಾವುದೇ ನಾಗರಿಕರು ಬಂದು ತಮ್ಮ ಸಮಸ್ಯೆಗಳನ್ನು ಅವರ ಮುಂದೆ ಮಂಡಿಸ ಬಹುದು. ಸರ್ಕಾರಿ ಪ್ರಕ್ರಿಯೆಯನ್ನು ಡಿಜಿಟಲೀಕರಣಗೊಳಿಸಲು ಮತ್ತು ಅದನ್ನು ಕಾಗದರಹಿತಮತ್ತುಪಾರದರ್ಶಕವಾಗಿಸಲು ಅವರು ಅನೇಕ ಉಪಕ್ರಮಗಳನ್ನು ಕೈಗೊಂಡಿದ್ದಾರೆ. ಜನರೊಂದಿಗೆ ಸಂಪರ್ಕವನ್ನು ಖಚಿತಪಡಿಸಿಕೊಳ್ಳಲು ಮತ್ತು ಉಳಿಸಿಕೊಳ್ಳಲು ಯುವ ಮುಖ್ಯಮಂತ್ರಿ ವಿವಿಧ ಅಪ್ಲಿಕೇಶನ್‌ಗಳು




ಮತ್ತು ಆನ್‌ಲೈನ್ ಪೋರ್ಟಲ್‌ಗಳನ್ನು ಪ್ರಾರಂಭಿಸಿದರು. ಗ್ರಾಮೀಣ ಬಡವರು, ರೈತರು, ಕಾರ್ಮಿಕರು ಮತ್ತು ದೀನದಲಿತರ ಸರ್ವತೋಮುಖ ಅಭಿವೃದ್ಧಿಗಾಗಿ ಸಕ್ರಿಯವಾಗಿ ಮತ್ತು ನಿರಂತರವಾಗಿ ಹೋರಾಡುತ್ತಿದ್ದಾರೆ ಎಂದರು.

ಬಸವಣ್ಣರವರ ಆಶಯದಂತೆ ನಮ್ಮ ಪಾರ್ಟಿ ಕೆಲಸವನ್ನು ಮಾಡುತ್ತಿದೆ. ಪ್ರಜಾಪ್ರಭುತ್ವದ ಸಿದ್ದಾಂತ ಸಮಾನತೆ, ಮೇಲೆ ಕೋಮು ಶಕ್ತಿಯ ವಿರುದ್ದವಾಗಿ ಕೆಲಸವನ್ನು ಮಾಡಲಾಗುತ್ತದೆ. ಜನತೆಯ ಸೇವೆಯನ್ನು ಜನಾರ್ಧನನ ಸೇವೆ ಎಂದು ಮಾಡಲಾಗುತ್ತಿದೆ. ಮಾನವಿಯತೆ ಮತ್ತು ಮನುಷ್ಯತ್ವ ಅಗತ್ಯವಾಗಿದೆ. ಜನಪರವಾದ ಕಾರ್ಯಕ್ರಮಗಳನ್ನು ರೂಪಿಸಿವುದರ ಮೂಲಕ ಜನನಾಯಕರಾಗಿದಾರೆ. ಹಿಂದುಳಿದ ವರ್ಗದವರಿಗೆ ಆದತ್ಯೆಯನ್ನು ನೀಡುವುದರ ಮೂಲಕ ಉತ್ತಮ ಸಮಾಜವನ್ನು ನಿರ್ಮಾಣ ಮಾಡಿದ್ದಾರೆ ಎಂದರು.

ಈ ಸಮಾರಂಭದಲ್ಲಿ ಭಾಗವಹಿಸಿದ್ದ ಸಾಹಿತಿ ಅನಂದಕುಮಾರ್ ಮಾತನಾಡಿ, ಜುಲೈ 1, 1973 ರಂದು ಸೈಫೈನಲ್ಲಿ ಶ್ರೀ ಮುಲಾಯಂ ಸಿಂಗ್ ಯಾದವ್ ಮತ್ತು ಶ್ರೀಮತಿ ಮಾಲತಿ ದೇವಿ ದಂಪತಿಗಳಿಗೆ ಜನಿಸಿದ ಅಖಿಲೇಶ್ ಯಾದವ್, ರಾಜಸ್ಥಾನದ ಧೋಲ್ಪುರ್ ಮಿಲಿಟರಿ ಶಾಲೆಯಲ್ಲಿ ಆರಂಭಿಕ ಶಿಕ್ಷಣವನ್ನು ಪಡೆದರು. ನಂತರ ಅವರು ಆಸ್ಟ್ರೇಲಿಯಾದ ಸಿಡ್ನಿ ವಿಶ್ವವಿದ್ಯಾಲಯ ಮತ್ತು ಮೈಸೂರು ವಿಶ್ವವಿದ್ಯಾಲಯದಿಂದ ಸಿವಿಲ್ ಪರಿಸರ ಎಂಜಿನಿಯರಿಂಗ್‌ನಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿಯನ್ನು ಪಡೆದರು.

ಶ್ರೀ ಅಖಿಲೇಶ್ ಯಾದವ್ ಅವರು 2012 ರಿಂದ 2017 ರವರೆಗೆ ಉತ್ತರ ಪ್ರದೇಶದ 20 ನೇ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದರು. ಅವರು ಮಾರ್ಚ್ 15, 2012 ರಂದು ಉತ್ತರ ಪ್ರದೇಶದ ಮುಖ್ಯಮಂತ್ರಿಯಾಗಿ ಅಧಿಕೃತ ಜವಾಬ್ದಾರಿಗಳನ್ನುವಹಿಸಿಕೊಂಡರು ಮತ್ತು 38 ನೇ ವಯಸ್ಸಿನಲ್ಲಿ ಈ ಹುದ್ದೆಯನ್ನು ಅಲಂಕರಿಸಿದ ಅತ್ಯಂತ ಕಿರಿಯ ವ್ಯಕ್ತಿ. ಅವರು 2000 ರಲ್ಲಿ ಕನೌಜ್‌ನಿಂದ ಲೋಕಸಭಾ ಚುನಾವಣೆಯಲ್ಲಿ ಗೆಲ್ಲುವ ಮೂಲಕ ತಮ್ಮ ರಾಜಕೀಯ ಪ್ರಯಾಣವನ್ನು ಪ್ರಾರಂಭಿಸಿದರು.

ನ್ಯಾಯವಾದಿಗಳು, ರಾಜ್ಯ ಪ್ರಧಾನ ಕಾರ್ಯದರ್ಶಿ ಎನ್.ಡಿ.ಗುರುಮೂರ್ತಿ ಹಾಗೂ ಜಿಲ್ಲಾ ಸಮಾಜವಾದಿ ಪಾರ್ಟಿ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಮಹಬೂಬ್ ಭಾಷಾ ಮತ್ತು ಎಸ್ ಟಿ ಘಟಕದ ಜಿಲ್ಲಾಧ್ಯಕ್ಷ ಡಾಕ್ಟರ್ ಶಿವಣ್ಣ ಟಿ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರಾಮಣ್ಣ, ಕಣಿವೆ ಮಾರಮ್ಮನ ಸಂಘದ ಅಧ್ಯಕ್ಷರಾದ ತಿಪ್ಪೇಸ್ವಾಮಿ, ಬಂಜರ ಸೇವಾ ಸಮಿತಿ ಅಧ್ಯಕ್ಷರಾದ ಗಿರೀಶ್ ನಾಯಕ್,ದಲಿತ ಮುಖಂಡರಾದ ಮಹಾಲಿಂಗಪ್ಪ ಕುಂಚಿಗನಾಳ,ರಾಜಣ್ಣ ರವಿ ಮುಖಂಡರು ಗಿರೀಶ್ ಇನ್ನು ಮುಂತಾದವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ: ನೋಂದಣಿ ಆರಂಭ



» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಜಾರಿಗೊಳಿಸಿ ಅಧಿಸೂಚಿಸಲಾಗಿದ್ದು, ನೋಂದಣಿ ಪ್ರಕ್ರಿಯೆ ಪ್ರಗತಿಯಲ್ಲಿದೆ.ಗ್ರಾಮ ಪಂಚಾಯಿತಿ ಮಟ್ಟದ ವಿಮಾ ಘಟಕಕ್ಕೆ ಚಳ್ಳಕೆರೆ ತಾಲ್ಲೂಕಿಗೆ ಶೇಂಗಾ (ಮಳೆಯಾಶ್ರಿತ), ಚಿತ್ರದುರ್ಗ ತಾಲ್ಲೂಕಿಗೆ ಮುಸುಕಿನ ಜೋಳ (ಮಳೆಯಾಶ್ರಿತ) ಹಿರಿಯೂರು ತಾಲ್ಲೂಕಿಗೆ ನೆಲಗಡಲೆ (ಶೇಂಗಾ) (ಮಳೆಯಾಶ್ರಿತ) ಮತ್ತುಸೂರ್ಯಕಾಂತಿ(ಮಳೆಯಾಶ್ರಿತ),ಹೊಳಲ್ಕೆರೆ ತಾಲ್ಲೂಕಿಗೆ ಮುಸುಕಿನ ಜೋಳ (ಮಳೆಯಾಶ್ರಿತ) ಮತ್ತು ರಾಗಿ (ಮಳೆಯಾಶ್ರಿತ) ಮೊಳಕಾಲ್ಮೂರು ತಾಲ್ಲೂಕಿಗೆ ನೆಲಗಡಲೆ (ಶೇಂಗಾ) (ಮಳೆಯಾಶ್ರಿತ), ಹೊಸದುರ್ಗ ತಾಲ್ಲೂಕಿಗೆ ರಾಗಿ (ಮಳೆಯಾಶ್ರಿತ) ಬೆಳೆಗಳನ್ನು ಮುಂಗಾರು ಹಂಗಾಮಿಗೆ ಬೆಳೆ ವಿಮೆಗೆ ಅಧಿಸೂಚನೆ ಮಾಡಲಾಗಿದೆ.ಹೋಬಳಿ ಮಟ್ಟದ ವಿಮಾ ಘಟಕಗಳಿಗೆ ಹತ್ತಿ (ನೀರಾವರಿ), ಹತ್ತಿ (ಮಳೆಯಾಶ್ರಿತ), ಹೆಸರು (ಮಳೆಯಾಶ್ರಿತ) ಶೇಂಗಾ(ಮಳೆಯಾಶ್ರಿತ), ಶೇಂಗಾ (ನೀರಾವರಿ), ಹುರುಳಿ (ಮಳೆಯಾಶ್ರಿತ), ಮುಸುಕಿನ ಜೋಳ (ನೀರಾವರಿ), ಮುಸುಕಿನ ಜೋಳ (ಮಳೆಯಾಶ್ರಿತ), ನವಣೆ (ಮಳೆಯಾಶ್ರಿತ), ಈರುಳ್ಳಿ (ನೀರಾವರಿ), ಈರುಳ್ಳಿ (ಮಳೆಯಾಶ್ರಿತ), ಭತ್ತ (ನೀರಾವರಿ), ಸಜ್ಜೆ (ಮಳೆಯಾಶ್ರಿತ), ತೊಗರಿ (ಮಳೆಯಾಶ್ರಿತ), ರಾಗಿ (ನೀರಾವರಿ), ರಾಗಿ (ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ), ಸಾವೆ (ಮಳೆಯಾಶ್ರಿತ), ಎಳ್ಳು (ಮಳೆಯಾಶ್ರಿತ), ಜೋಳ (ನೀರಾವರಿ), ಜೋಳ (ಮಳೆಯಾಶ್ರಿತ), ಸೂರ್ಯಕಾಂತಿ (ನೀರಾವರಿ), ಸೂರ್ಯಕಾಂತಿ (ಮಳೆಯಾಶ್ರಿತ), ಟೊಮ್ಯಾಟೊ ಬೆಳೆಗಳಿಗೆ ವಿಮೆಗೆ ನೋಂದಾಯಿಸಲು ಅಧಿಸೂಚನೆ ಮಾಡಲಾಗಿದೆ. (ತಮ್ಮ ಹೋಬಳಿ ಮಟ್ಟದ ಬೆಳೆಯ ವಿವರವನ್ನು ಸಂಬಂಧಪಟ್ಟ ಕೃಷಿ ಅಧಿಕಾರಿಗಳು ರೈತ ಸಂಪರ್ಕಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಲು ಕೋರಿದೆ) ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ಆಸಕ್ತ ರೈತರು ಬೆಳೆ ವಿಮೆಗೆ ನೋಂದಣಿ ಮಾಡಲು ಹೆಸರು (ಮಳೆಯಾಶ್ರಿತ), ಮತ್ತು ಈರುಳ್ಳಿ (ನೀರಾವರಿ), ಬೆಳೆಗಳಿಗೆ ದಿನಾಂಕ:15-07-2025 ಮತ್ತು ಹತ್ತಿ (ನೀರಾವರಿ) ಹತ್ತಿ (ಮಳೆಯಾಶ್ರಿತ), ಶೇಂಗಾ (ನೀರಾವರಿ), ಶೇಂಗಾ (ಮಳೆಯಾಶ್ರಿತ), ಹುರುಳಿ (ಮಳೆಯಾಶ್ರಿತ), ಮೆಕ್ಕೆಜೋಳ (ನೀರಾವರಿ), ಮೆಕ್ಕೆಜೋಳ (ಮಳೆಯಾಶ್ರಿತ), ಈರುಳ್ಳಿ (ಮಳೆಯಾಶ್ರಿತ), ಸಜ್ಜೆ (ಮಳೆಯಾಶ್ರಿತ), ತೊಗರಿ (ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ), ಸಾವೆ (ಮಳೆಯಾಶ್ರಿತ), ಎಳ್ಳು (ಮಳೆಯಾಶ್ರಿತ), ಜೋಳ (ಮಳೆಯಾಶ್ರಿತ), ಜೋಳ (ನೀರಾವರಿ), ಸೂರ್ಯಕಾಂತಿ (ನೀರಾವರಿ), ಸೂರ್ಯಕಾಂತಿ (ಮಳೆಯಾಶ್ರಿತ), ಟೊಮ್ಯಾಟೊ ಬೆಳೆಗಳಿಗೆ ದಿನಾಂಕ: 31-07-2025ರಂದು ಹಾಗೂ ನವಣೆ (ಮಳೆಯಾಶ್ರಿತ) ಭತ್ತ (ನೀರಾವರಿ), ರಾಗಿ (ಮಳೆಯಾಶ್ರಿತ), ರಾಗಿ (ನೀರಾವರಿ) ಬೆಳೆಗಳಿಗೆ ದಿನಾಂಕ:16-08-2025 ಕೊನೆಯ ದಿನಾಂಕವಾಗಿರುತ್ತದೆ.ಬ್ಯಾಂಕಿನಲ್ಲಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿಯಲ್ಲಿ ಒಳಪಡಿಸಲಾಗುವುದು. ತದನಂತರ ಬೆಳೆ ಸಾಲ ಪಡೆದ ರೈತರು ಈ ಯೋಜನೆಯಲ್ಲಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ, ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿಅಂತಿಮ ದಿನಾಂಕಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು. ಆರ್ಥಿಕ ಸಂಸ್ಥೆಗಳು/ಬ್ಯಾಂಕ್/ಸಾರ್ವಜನಿಕ ಸೇವಾ ಕೇಂದ್ರ (ಅಂಟಟಂಟ ಖಜಡಿತುಛಿಜ ಅಜಟಣಜಡಿ)ಗಳಲ್ಲಿ ರೈತರನ್ನು ಬೆಳೆ ವಿಮೆಗೆ ನೋಂದಾಯಿಸಿದಾಗ ಬೆಳೆ ವಿಮೆ ಪ್ರಸ್ತಾವನೆಯನ್ನು ಹಾಗೂ ವಿಮಾಕಂತನ್ನು ನಿಗಧಿತ ಸಮಯದೊಳಗೆ ನಿಯಮಾನುಸಾರ ಅನುಷ್ಠಾನ ವಿಮಾ ಸಂಸ್ಥೆಗಳಿಗೆ ವರ್ಗಾಯಿಸಲು ಕ್ರಮಕೈಗೊಳ್ಳತಕ್ಕದ್ದು, ನೋಂದಣಿ ಪ್ರಕ್ರಿಯೆಯ ಹಂತದಲ್ಲಿ ಮೇಲೆ ತಿಳಿಸಿದ ಸಂಸ್ಥೆಗಳ ನಿರ್ಲಕ್ಷದಿಂದ ಯಾವುದೇ ಲೋಪ ದೋಷಗಳು ಉಂಟಾದಲ್ಲಿ ಅದರಿಂಗಾಗುವ ಬೆಳೆ ವಿಮೆ ಪರಿಹಾರ ವ್ಯಾಜ್ಯಗಳಿಗೆ ಸಂಬಂಧಿಸಿದ ಸಂಸ್ಥೆಗಳೆ ನೇರ ಹೊಣೆಗಾರರಾಗಿರುತ್ತಾರೆ. ಆಸಕ್ತ ರೈತರು ತಮ್ಮ ವ್ಯಾಪ್ತಿಯ ಬ್ಯಾಂಕುಗಳಲ್ಲಿ ಹಾಗೂ ಅನುಮೋದಿತ ಸಾರ್ವಜನಿಕ ಸೇವಾ ಕೇಂದ್ರಗಳಲ್ಲೂ ವಿಮೆಗೆ ನೋಂದಣಿ ಮಾಡಬಹುದಾಗಿದೆ. ಚಿತ್ರದುರ್ಗ ಜಿಲ್ಲೆಗೆ Oriental General Insurance Company, ಅನುಷ್ಠಾನ ಸಂಸ್ಥೆಯಾಗಿರುತ್ತದೆ. ರೈತರು ನೋಂದಾಣಿಗಾಗಿ ಕಡ್ಡಾಯವಾಗಿ ಈಖಗಿಖಖಿಖ ಖಆ (ಈಖಆ) ಹೊಂದಿರಬೇಕು. ಆಸಕ್ತ ರೈತ ಬಾಂದವರು ನಿಗಧಿತ ದಿನಾಂಕದೊಳಗೆ ಬೆಳೆವಿಮೆಗೆನೋಂದಾವಣೆಮಾಡಲು ವಿನಂತಿಸಿದೆ. ಅಂತಿಮ ಸಮಯದಲ್ಲಿ ಜನದಟ್ಟಣೆಯಿಂದಾಗಿ ನೋಂದಾಣಿಯಲ್ಲಿ ತಪ್ಪುಗಳು ಸಂಭವಿಸಿ, ವಿಮೆ ಪರಿಹಾರ ಬಾರದಿರುವ ಸಂಭವವಿರುತ್ತದೆ. ಇದಕ್ಕೆ ಅವಕಾಶ ಕೊಡದೇ ಸಕಾಲದಲ್ಲಿ ನೋಂದಾವಣೆ ಮಾಡಲು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ.

### ಪತ್ರಿಕಾ ದಿನಾಚರಣೆಯಲ್ಲಿ ಹಿರಿಯ ಪತ್ರಕರ್ತ ಡಾ.ಎಚ್.ಬಿ.ಮಂಜುನಾಥ

# ರೋಚಕತೆಗಿಂತ ರಚನಾತ್ಮಕತೆ ಕಡೆಗೆ ಗಮನಹರಿಸಿ

» ದಾವಣಗೆರೆ

ಮುದ್ರಣ ಹಾಗೂ ದೃಶ್ಯ ಮಾಧ್ಯಮಗಳು ರೋಚಕ ಹಾಗೂ ರಂಜನಾತ್ಮಕ ಸುದ್ದಿಗಳಿಗೆ ಆದ್ಯತೆ ಕೊಡದೆ ರಚನಾತ್ಮಕತೆಯ ಬಗ್ಗೆ ಗಮನ ನೀಡಬೇಕಿದೆ ಎಂದು ಹಿರಿಯ ಪತ್ರಕರ್ತ ಡಾ.ಎಚ್.ಬಿ.ಮಂಜುನಾಥ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದಾವಣಗೆರೆ ಜಿಲ್ಲಾ ವತಿಯಿಂದ ಏರ್ಪಾಡಾಗಿದ್ದ ಪತ್ರಿಕಾ ದಿನಾಚರಣೆ ನಿಮಿತ್ತವಾಗಿಹಿರಿಯಪತ್ರಕರ್ತದಿಹರಡಿಕರ್ ಮಂಜಪ್ಪನವರ ಪುತ್ಥಳಿಗೆ ಮಾಲಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ದೃಶ್ಯ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳು ಎಷ್ಟೇ ವ್ಯಾಪಕವಾದರೂ ಭಾರತದಲ್ಲಿ ಮುದ್ರಣ ಮಾಧ್ಯಮದ ಬೇಡಿಕೆಗೆ ಕುಂದು ಉಂಟಾಗಿಲ್ಲ. ಏಕೆಂದರೆ ಮುದ್ರಣ ಮಾಧ್ಯಮದ ಬಗ್ಗೆ ಜನರಲ್ಲಿ ಇನ್ನೂ ವಿಶ್ವಾಸ ಉಳಿದುಕೊಂಡಿದೆ. ದೃಶ್ಯ ಮಾಧ್ಯಮಗಳು ಹಾಗೂ ಜಾಲತಾಣಗಳು ಅವಸರದ ಸರಕಾದರೆ ಮುದ್ರಣ ಮಾಧ್ಯಮವು ದಿನಪೂರ್ತಿ ಕೂಲಂಕುಶ ಪರಿಶೀಲಿಸಿ ಮರುದಿನ ಸತ್ಯವಾಗಿದ್ದನ್ನು ಕೊಡುತ್ತವೆ ಎಂಬ ವಿಶ್ವಾಸ ಓದುಗರಲ್ಲಿ ಈಗಲೂ ಇದೆ ಎಂದರು.ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಪತ್ರಿಕೆಯವರು ಮೌಲ್ಯಯುತ ವರದಿಗಾರಿಕೆಯಿಂದ ದೇಶದ ಆರ್ಥಿಕ ಅಭಿವೃದ್ಧಿ ಕಡೆಗೆ ಒತ್ತು ಕೊಡಬೇಕು, ಸರ್ಕಾರವನ್ನು ಉಳಿಸುವ ಅಥವಾ ಬೀಳಿಸುವ ಸಾಮರ್ಥ್ಯ ಪತ್ರಿಕೆ ಹಾಗೂ ಮಾಧ್ಯಮಗಳಿಗೆ ಇದೆ, ಪತ್ರಕರ್ತರಿಗೆ ಆರೋಗ್ಯ ವಿಮೆ ಅಪಘಾತ ವಿಮೆ ದೊರೆಯಬೇಕು, ಸವಲತ್ತುಗಳನ್ನು ಒದಗಿಸುವಾಗ ತಾರತಮ್ಯ ಇರಬಾರದು ಎಂದರು.ಮಾಜಿ ಮಹಾಪೌರ ಚಮನ್ ಸಾಬ್ ಮಾತನಾಡಿ, ಪತ್ರಿಕೆಗಳಾಗಲಿ ಮಾಧ್ಯಮಗಳಾಗಲಿ ಸುಳ್ಳಿನ ಸಾಮ್ರಾಜ್ಯವಾಗದೆ ನಿಜ ವರದಿಗಾರಿಕೆಗೆ ಗಮನ ಕೊಡಬೇಕೆಂದರು.




ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ನಾಗರಾಜ ಬಡದಾಳ ಮಾತನಾಡಿ, ಸ್ಪರ್ಧಾತ್ಮಕ ಯುಗದಲ್ಲಿ ಪತ್ರಿಕೆಗಳನ್ನು ಉನ್ನತಿಗೆ ಕೊಂಡೊಯ್ಯುವ ಜವಾಬ್ದಾರಿ ಮಹತ್ತರವಾಗಿದೆ, ಮುದ್ರಣ ಹಾಗೂ ದೃಶ್ಯ ಮಾಧ್ಯಮಗಳ ಮೇಲಿನ ಜನರ ವಿಶ್ವಾಸವನ್ನು ಕಾಪಾಡಿಕೊಳ್ಳುವ ಪ್ರತಿಜ್ಞೆಯನ್ನು ಇಂತಹ ಆಚರಣೆಯ ದಿನ ಮಾಡಬೇಕು ಎಂದರು.

ದಾವಣಗೆರೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಹಾಗೂ ಕರ್ನಾಟಕ ಮಾಧ್ಯಮ ಅಕಾಡೆಮಿ ಸದಸ್ಯ ಇ ಎಂ ಮಂಜುನಾಥ ಅಧ್ಯಕ್ಷೀಯ ನುಡಿಗಳನ್ನಾಡುತ್ತಾ ವೃತ್ತಿ ಗೌರವವನ್ನು ವೃದ್ಧಿಸಿ ಕೊಳ್ಳುವಂತಹ ಕಾರ್ಯಗಳು ಮುದ್ರಣ ಹಾಗೂ ದೃಶ್ಯ ಮಾಧ್ಯಮಗಳಿಂದ ಹೆಚ್ಚಾಗಿ ಆಗಬೇಕು ಎಂದರು.

ಸಂಘದ ಪ್ರಧಾನಕಾರ್ಯದರ್ಶಿಎ. ಫಕ್ರುದ್ದೀನ್, ಹಿರಿಯ ಪತ್ರಕರ್ತರಾದ ಕೆ.ಚಂದ್ರಣ್ಣ, ಏಕಾಂತಪ್ಪ, ತಿಪ್ಪೇಸ್ವಾಮಿ, ವೀರೇಶ್, ಕೆಜಿ ಶಿವಕುಮಾರ್, ನಿಂಗಪ್ಪ, ಸಿ.ವೇದಮೂರ್ತಿ,ಚೆನ್ನಬಸವಶೀಲವಂತ್, ಅನಿಲ್ ಕುಮಾರ್, ಮುದ್ದಯ್ಯ ಇದ್ದರು.

### ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ

# ಎಸ್‌ಸಿಪಿ, ಟಿಎಸ್‌ಪಿ ಯೋಜನಾ ಫಲಾನುಭವಿಗಳಿಗೆ ಪರಿಣಾಮಕಾರಿ ಯೋಜನೆಗಳನ್ನು ಅನುಷ್ಠಾನಗೊಳಿಸಿ

» ದಾವಣಗೆರೆ

ಎಸ್‌ಸಿಪಿ, ಟಿಎಸ್‌ಪಿ ಯೋಜನೆಯಡಿ ವಿವಿಧ ಇಲಾಖೆಗಳಲ್ಲಿ ಬಿಡುಗಡೆಯಾದ ಅನುದಾನವನ್ನು ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳುವ ಮೂಲಕ ಯೋಜನೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾದರಸ್ವಾಮಿ ಸೂಚಿಸಿದರು.



ವಿವಿಧ ಇಲಾಖೆಗಳಿಂದ ಪ.ಜಾತಿ ಉಪಯೋಜನೆ, ಬುಡಕಟ್ಟು ಉಪಯೋಜನೆ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ.ಜಾತಿ, ಪ.ಪಂಗಡ ಯೋಜನಯಡಿ ಅನುಷ್ಠಾನಗೊಂಡಿರುವ ವಿವಿಧ ಕಾರ್ಯಕ್ರಮಗಳ ಭೌತಿಕ ಮತ್ತು ಆರ್ಥಿಕ ಪ್ರಗತಿ ಕುರಿತು ಮಾಹಿತಿ ಪಡೆದ ಅವರು, 2025-26 ನೇ ಸಾಲಿಗೆ ವಿವಿಧ ಇಲಾಖೆಗಳಿಗೆ ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನದಡಿ ಒಟ್ಟು. ರೂ.300.42 ಕೋಟಿ ಹಂಚಿಕೆಯಾಗಿದೆ. ಇದರಲ್ಲಿ ಇದುವರೆಗೆ 134 ಕೋಟಿ ಅನುದಾನ ಬಿಡುಗಡೆಯಾಗಿದೆ. ಬಿಡುಗಡೆಯಾದ ಅನುದಾನದಲ್ಲಿ ಶೇ 79.81 ರಷ್ಟು ಪ್ರಗತಿ ಸಾಧಿಸಲಾಗಿದೆ.

ಕೆಲವು ಇಲಾಖೆಗಳಿಗೆ ಮೊದಲ ತ್ರೈಮಾಸಿಕದ ಅನುದಾನ ಬಿಡುಗಡೆಯಾಗದ ಇಲಾಖೆ ಅಧಿಕಾರಿಗಳು ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸುವ ಮೂಲಕ ಬಿಡುಗಡೆಗೆ ಕ್ರಮವಹಿಸಬೇಕು. ಮುಂದಿನ ತ್ರೈಮಾಸಿಕದ ವೇಳೆಗೆ ಅನುದಾನ ಪಡೆದು ಪ್ರಗತಿ ಸಾಧಿಸಲು ತಿಳಿಸಿ ಯಾವ ಇಲಾಖೆಯಲ್ಲಿ ಸಮಸ್ಯೆ ಇದೆ ಮತ್ತು ಪ್ರಗತಿಯಾಗಿಲ್ಲ ಎಂತಹ ಇಲಾಖೆಗಳ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪರಿಶೀಲನೆ ನಡೆಸಬೇಕೆಂದರು.

ಮಹಿಳಾ ಕ್ರೀಡಾ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕಾಗಿ ನಗರದಲ್ಲಿ 100*100 ಅಡಿ ಅಳತೆಯ ನಿವೇಶನವನ್ನು ಮಂಜೂರು ಮಾಡಲು ಪಾಲಿಕೆ ಆಯುಕ್ತರಿಗೆ ತಿಳಿಸಿದರು.

ಪಾಲಿಕೆ ಆಯುಕ್ತರಾದ ರೇಣುಕಾ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕಿ ರೇಷ್ಮ ಕೌಸರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ್ ಸೇರಿದಂತೆ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ನ್ಯಾಷನಲ್ ಇಂಗ್ಲಿಷ್ ಶಾಲೆಯಲ್ಲಿ ಶಾಲಾ ಸಂಸತ್ ಉದ್ಘಾಟನೆ




» ಚಿತ್ರದುರ್ಗ

ಸಮಾಜದ ಆರೋಗ್ಯ ಕಾಪಾಡುವಲ್ಲಿ ವೈದ್ಯರ ಮೇಲೆ ಹೊಣೆಗಾರಿಕೆಯಿದೆ ಎಂದು ಡಾ.ಸುಪ್ರಿಯಾ ಪ್ರಶಾಂತ್ ತಿಳಿಸಿದರು.

ನ್ಯಾಷನಲ್ ಇಂಗ್ಲಿಷ್ ಶಾಲೆಯಲ್ಲಿ ಮಂಗಳವಾರ ಏರ್ಪಡಿಸಲಾಗಿದ್ದ ಶಾಲಾ ಸಂಸತ್ ಉದ್ಘಾಟಿಸಿ ಮಾತನಾಡಿದರು.

ಬಿ.ಸಿ.ರಾಯ್ ಸ್ಮರಣಾರ್ಥ ಪ್ರತಿ ವರ್ಷವೂ ಜು.1 ರಂದು ವೈದ್ಯರ ದಿನಾಚರಣೆ ಆಚರಿಸಿಕೊಂಡು ಬರಲಾಗುತ್ತಿದೆ. ಎಲ್ಲರ ಜೀವನದಲ್ಲಿ ಆರೋಗ್ಯಕ್ಕೆ ಪ್ರಾಮುಖ್ಯತೆಯಿದೆ. ಹಾಗಾಗಿ ವೈದ್ಯರ ವೃತ್ತಿ ಅತ್ಯಂತ ಪವಿತ್ರವಾದುದು. ಮಕ್ಕಳು ಶಿಕ್ಷಣದ ಕಡೆ ಹೆಚ್ಚಿನ ಗಮನಕೊಟ್ಟಾಗ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು ಎಂದು ಹೇಳಿದರು.

ನಗರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಮಹಮದ್ ಅಹಮದ್‌ಪಾಷ ನೆಸ್ಟ್ ಮಾಂಟೆಸರಿ ವಿಭಾಗ ಉದ್ಘಾಟಿಸಿ ಮಾತನಾಡುತ್ತ ವೈದ್ಯರಿಗೂ ಶಾಲೆಗೂ ಸಂಬಂಧವಿದೆ.ಏಕೆಂದರೆ ಚಿಕ್ಕಂದಿನಿಂದಲೆ ಚೆನ್ನಾಗಿ ಓದಿದರೆ ಮಾತ್ರ ಮುಂದೆ ವೈದ್ಯರಾಗಬಹುದು. ರೋಗಿಯ ಕಾಯಿಲೆಯನ್ನು ವಾಸಿ ಮಾಡುವ ವೈದ್ಯರು ಹಾಗೂ ಮಕ್ಕಳಿಗೆ ಪಾಠ ಹೇಳಿಕೊಡುವ ಶಿಕ್ಷಕರುಗಳು ತಾಳ್ಮೆಯಿಂದಿರಬೇಕೆಂದು ಸಲಹೆ ನೀಡಿದರು.ಶಾಲೆಯ ಸಂಸ್ಥಾಪಕ ಆಡಳಿತಾಧಿಕಾರಿ ಸೈಯದ್ ಅಖ್ತರ್, ಕಾರ್ಯದರ್ಶಿ ಡಾ.ಸಯೀದನಾಝ್, ನಿರ್ದೇಶಕರಾದ ಸೈಯದ್ ಸುಜಾತ್, ಪ್ರಾಚಾರ್ಯರಾದ ರುಖಯ್ಯಉಪ ಪ್ರಾಂಶುಪಾಲರಾದ ಶಹನಾಜ್‌ಬೇಗಂ, ವ್ಯವಸ್ಥಾಪಕ ಮಹಮದ್ ಇಮ್ರಾನ್ ಇವರುಗಳು ವೇದಿಕೆಯಲ್ಲಿದ್ದರು.ವೈದ್ಯರ ದಿನಾಚರಣೆ ಪ್ರಯುಕ್ತ ಪುಟಾಣಿ ಮಕ್ಕಳು ವೈದ್ಯರ ದಿರಿಸಿನಲ್ಲಿ ಕಂಗೊಳಿಸುತ್ತಿದ್ದರು.

# ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ಕಾರ್ಯ ಆಗಬೇಕು: ಸ್ವಾಮೀಜಿ

» ಹೊಸದುರ್ಗ

ಪ್ರಸ್ತುತ ಕಲಾವಿದರ ಜೀವನ ಬಹಳ ಕಷ್ಟಕರವಾಗಿದ್ದು, ಅಂತಹ ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸಿ,ಬೆಳೆಸುವ ಕಾರ್ಯವಾಗಬೇಕು. ಆಗ ಮಾತ್ರ ಕಲಾವಿದರು ಸುಸ್ಥಿರ ಜೀವನ ನಡೆಸಲು ಸಾಧ್ಯವೆಂದು ಹಳೆಬೀಡು ಪುಷ್ಪಗಿರಿ ಮಹಾಸಂಸ್ಥಾನ ಸೋಮಶೇಖರ್ ಶಿವಾಚಾರ್ಯ ಸ್ವಾಮೀಜಿ ಹೇಳಿದರು.ಕಲ್ಯಾಣ ಕರ್ನಾಟಕ ವೇದಿಕೆ ಚಿತ್ರದುರ್ಗ ಜಿಲ್ಲಾ ಘಟಕದ ವತಿಯಿಂದ ಪಟ್ಟಣದ ಅಶೋಕ ರಂಗಮಂದಿರದಲ್ಲಿ ಕಲ್ಯಾಣ ಕರ್ನಾಟಕ ವೇದಿಕೆ ಜಿಲ್ಲಾಧ್ಯಕ್ಷ ಡಾ: ಚಂದ್ರು ಕಲಾವಿದ ಅವರ ನೇತೃತ್ವದಲ್ಲಿ ನಡೆದ ಪುನೀತ್ ರಾಜ್ ಕುಮಾರ್ ಸವಿನೆನಪಿಗಾಗಿ 2 ನೇ ವರ್ಷದ 'ಸಂಗೀತ ಸಂಭ್ರಮ ಹಾಗೂ ರಾಜ್ಯ ಪ್ರಶಸ್ತಿ ಪ್ರಧಾನ ಸಮಾರಂಭ'ದಲ್ಲಿ ಸಾನಿಧ್ಯವಹಿಸಿ ಮಾತನಾಡಿದರು. ಚಿತ್ರದುರ್ಗ ಮತ್ತು ಹೊಸದುರ್ಗದಲ್ಲಿ ಕಲೆಗೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತಿದ್ದು, ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಇನ್ನಷ್ಟು ನಡೆಯಬೇಕಿದೆ. ನಟ ಪುನೀತ್ ರಾಜ್ ಕುಮಾರ್ ಬದುಕಿದ್ದಾಗ ಸಾಕಷ್ಟು ಸಾಮಾಜಿಕ ಕಾರ್ಯಗಳನ್ನು ಮಾಡಿದ್ದಾರೆ. ಅವರ ನಿಧನದ ನಂತರ ಸಾಮಾಜಿಕ ಕಾರ್ಯಗಳು ಬೆಳಕಿಗೆ ಬಂದವು. ಈಗ ಪ್ರತಿಯೊಂದು ಹಳ್ಳಿಯ ಜನರು ಪುನೀತ್ ಬಗ್ಗೆ ಮಾತನಾಡುವಂತಾಗಿದ್ದು, ಸಾಧನೆ ಎಂದರೆ ಅದು. ಈಚೆಗೆ ಇಂಗ್ಲಿಷ್ ವ್ಯಾಮೋಹದಿಂದ ಕನ್ನಡ ಭಾಷೆ ಮತ್ತು ಸಾಹಿತ್ಯ ಮರೆಯಾಗುತ್ತಿದ್ದೆ ಎಂದು ಬೇಸರ ವ್ಯಕ್ತಪಡಿಸಿದರು.



# ಹೊಸದುರ್ಗ ಪೊಲೀಸ್ ಠಾಣೆಗೆ ಭೇಟಿ ನೀಡಿದ ಶಾಲಾ ಮಕ್ಕಳು



» ಹೊಸದುರ್ಗ

ಹಕ್ಕುಗಳ ಪಾಲನೆ ಮತ್ತು ಕಾನೂನಿನ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಪಟ್ಟಣದ ಅಶೋಕ ರಂಗಮಂದಿರ ಸರ್ಕಾರಿ ಪ್ರಧಾನ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಪೊಲೀಸ್ ಠಾಣೆಗೆ ಭೇಟಿ ನೀಡಿದ್ದರು. ಈ ವೇಳೆ ಮಕ್ಕಳಿಗೆ ಠಾಣೆಯಲ್ಲಿ ದೂರುಗಳನ್ನು ಯಾವ ರೀತಿಯಾಗಿ ಸ್ವೀಕರಿಸಲಾಗುವುದು, ಅಪರಾಧಿಗಳಿಗೆ ಯಾವ ರೀತಿ ಶಿಕ್ಷೆ ವಿಧಿಸಲು ಕ್ರಮ ಜರುಗಿಸಲಾಗುವುದು ಮತ್ತು ಹೇಗೆ ದೂರು ನೀಡಬೇಕೆಂಬುದನ್ನು ಸಿಬ್ಬಂದಿಗಳು ತಿಳಿಸಿಕೊಟ್ಟರು. ಠಾಣೆಯ ಪಿಎಸ್‌ಐ ಭೀಮನಗೌಡ ಪಾಟೀಲ್ ಮಾತನಾಡಿ, ಕಾನೂನಿನ ಅಡಿಯಲ್ಲಿ ಪ್ರತಿಯೊಬ್ಬರು ಸಮಾನರೇ. ನಮ್ಮ ಭಾರತ ದೇಶದಲ್ಲಿ ಪ್ರತಿಯೊಬ್ಬರಿಗೂ ಮೂಲಭೂತ ಹಕ್ಕುಗಳಿದ್ದು, ಮತ್ತೊಬ್ಬರ ಹಕ್ಕುಗಳಿಗೆ ಧಕ್ಕೆ ತಾರದಂತೆ ಮಾನವೀಯತೆಯಿಂದ ನಡೆದುಕೊಳ್ಳಬೇಕಿದೆ. ಯಾರಾದರೂ ದುರ್ನಡತೆ ತೋರಿದಾಗ, ಒಂಟಿಯಾಗಿದ್ದಾಗ, ಅಪರಿಚಿತರನ್ನು ಕಂಡಾಗ ಯಾವೆಲ್ಲಾ ಕ್ರಮಗಳನ್ನು ವಹಿಸಬೇಕು ಎಂಬೆಲ್ಲಾ ವಿಚಾರಗಳ ಬಗ್ಗೆ ಸರಳವಾಗಿ ಮಕ್ಕಳಿಗೆ ಮಾಹಿತಿ ನೀಡಿದರು. ಮಕ್ಕಳು ಕುತೂಹಲದಿಂದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯವೈಖರಿಯನ್ನು ವೀಕ್ಷಿಸಿ, ಅವರ ಮಾತುಗಳನ್ನು ಆಲಿಸಿದರು. ಈ ವೇಳೆ ಶಾಲೆಯ ಮುಖ್ಯೋಪಾಧ್ಯಾಯರಾದ ಲಕ್ಷ್ಮೀದೇವಿ, ಶಿಕ್ಷಕರಾದ ಪಾರ್ವತಮ್ಮ, ನಾಗರತ್ನಮ್ಮ, ಯಶೋಧಮ್ಮ, ಮಂಜುಳಾ, ವನಜಾಕ್ಷಿ ಮತ್ತು ವೆಂಕಟೇಶ್ ಸೇರಿದಂತೆ ವಿದ್ಯಾರ್ಥಿಗಳಿದ್ದರು.

## ಪ್ರಮುಖ ಸುದ್ದಿ

# ಲೆಕ್ಕ ಪರಿಶೋಧಕರ ದಿನಾಚರಣೆ: ರಕ್ತದಾನ ಶಿಬಿರ

» ಚಿತ್ರದುರ್ಗ

ರೋಟರಿ ಕ್ಲಬ್ ಚಿತ್ರದುರ್ಗ,ರೋಟರಿ ಕ್ಲಬ್ ಆಫ್ ಚಿತ್ರದುರ್ಗ ಫೋರ್ಟ್, ರೋಟರಿ ಕ್ಲಬ್ ಚಿನ್ಮೂಲಾದ್ರಿ, ಆರ್ಯ ವೈಶ್ಯಸಂಘ ಇನ್ನರ್ ವೀಲ್‌ಕ್ಲಬ್ ಆಫ್ ಚಿತ್ರದುರ್ಗ ಪೋರ್ಟ್ ಸಂಹಯೋಗದೊಂದಿಗೆಬಸವೇಶ್ವರಬ್ಲಡ್‌ಬ್ಯಾಂಕ್ ಮತ್ತು ರೆಡ್‌ಕ್ರಾಸ್ ಸೊಸೈಟಿ ಸಹಕಾರದೊಂದಿಗೆ ಚಿತ್ರದುರ್ಗ ನಗರದಲ್ಲಿ ಮಂಗಳವಾರ ವಾಸವಿ ಮಹಲ್‌ನಲ್ಲಿ ವೈದ್ಯರ ಮತ್ತು ಲೆಕ್ಕ ಪರಿಶೋಧಕರ ದಿನಾಚರಣೆಯ ಪ್ರಯುಕ್ತ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು.



ಈ ರಕ್ತದಾನ ಶಿಬಿರದಲ್ಲಿ ಪುರುಷ ಮಹಿಳೆ ಎನ್ನದೆ ಎಲ್ಲರು ಸಹಾ ರಕ್ತವನ್ನು ದಾನ ಮಾಡಿದರು. ರಕ್ತದಾನ ಶಿಬಿರವನ್ನು ಉದ್ಘಾಟಿಸಿದ ರೋಟರಿಯನ್ ಸಂಸ್ಥೆಯ ಜಿಲ್ಲಾ ಗೌರನ್ನರ್ ಎಂ.ಕೆ.ರವೀಂದ್ರ ಮಾತನಾಡಿ, ರಕ್ತದಾನ ಎನ್ನುವುದು ಸ್ವಯಂ ಪ್ರೇರಿತವಾಗಿ ಬರಬೇಕಿದೆ, ರಕ್ತದ ಕೊರತೆಯಿಂದ ಬಹಳಷ್ಟು ಜನ ನರಳುತ್ತಿ ದ್ದಾರೆ ಈ ರೀತಿಯಾದ ರಕ್ತದಾನ ಶಿಬಿರಗಳನ್ನು ಆಯೋಜನೆ ಮಾಡುವುದರ ಮೂಲಕ ಅಂತಹರಿಗೆ ನೆರವಾಗಬೇಕಿದೆ. ನಮ್ಮ ದೇಹದಲ್ಲಿ ರಕ್ತವನ್ನು ದಾನ ಮಾಡುವುದರಿಂದ ಯಾವುದೇ ರೀತಿಯ ಹಾನಿಯಾ ಗುವುದಿಲ್ಲ ಬದಲಿಗೆ ಹೊಸದಾದ ರಕ್ತ ಬರುತ್ತದೆ. ರಕ್ತವನ್ನು ನಿಯಮಿತವಾದ ಸಮಯದಲ್ಲಿ ದಾನ ಮಾಡುವುದರಿಂದ ನಮ್ಮ ದೇಹದಲ್ಲಿ ರಕ್ತ ಉತ್ಪಾದನೆಯಾಗುತ್ತದೆ ಎಂದರು.

ಈ ರಕ್ತದಾನ ಶಿಬಿರದಲ್ಲಿ ಸುಮಾರು 20 ಯೂನಿಟ್‌ಗಳಷ್ಟು ರಕ್ತವನ್ನು ಸಂಗ್ರಹ ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್‌ನ ಅಧ್ಯಕ್ಷರಾದ ಭಾಗ್ಯಲಕ್ಷ್ಮೀ, ರೋಟರಿ ಕ್ಲಬ್ ಚಿತ್ರದುರ್ಗ ಫೋರ್ಟ್‌ನ ಅಧ್ಯಕ್ಷರಾದ ಶಶಿಧರ್ ಗುಪ್ತ, ರೋಟರಿ ಕ್ಲಬ್ ಚಿನ್ಮೂಲಾದ್ರಿ ಅಧ್ಯಕ್ಷರಾದ ದಿಲ್‌ಷಾದ್ ವುನೀಸ್, ಆರ್ಯ ವೈಶ್ಯ ಸಂಘದ ಅಧ್ಯಕ್ಷರಾದ ಶ್ರೀನಿವಾಸ್ ಬಾಬು, ಇನ್ನರ್ ವೀಲ್‌ಕ್ಲಬ್‌ನ ಅಧ್ಯಕ್ಷರಾದ ವೀಣಾ, ಇನ್ನರ್ ವೀಲ್‌ಕ್ಲಬ್ ಆಫ್ ಚಿತ್ರದುರ್ಗ ಪೋರ್ಟ್‌ನ ಅಧ್ಯಕ್ಷರಾದ ಗಾಯತ್ರಿ ಶಿವರಾಂ, ರೋಟೇರಿಯನ್‌ಗಳಾದ ಮಧುಪ್ರಸಾಸದ, ಎಸ್.ವಿರೇಶ್, ಸೂರ್ಯ ಪ್ರಕಾಶ್, ವೀರಭದ್ರಸ್ವಾಮಿ, ಜಯಶ್ರೀ ಷಾ, ಮಾಧುರಿ, ಯೋಗೀಶ್, ಮಂಜುನಾಥ್ ಬಾಗತ್ವ, ಗುರುಮೂರ್ತಿ ಸುರೇಶ್, ಶಿವರಾಂ, ಮೈಲೇಶ್ ಕುಮಾರ್, ಮಹಡಿ ಶಿವಮೂರ್ತಿ, ಚಂದ್ರಮೋಹನ್, ವೆಂಕಟೇಶ್, ಮಧು ಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಅವಧಿ ವಿಸ್ತರಣೆ

ದಾವಣಗೆರೆ: ಪ್ರಸಕ್ತ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಅಭ್ಯಾಸ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಜುಲೈ 10 ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆ ಅಧಿಕಾರಿಯವರು ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ದ್ವಿಚಕ್ರ ವಾಹನ(ಬೈಕ್) ರಿಪೇರಿ ಮತ್ತು ಸೇವೆ ಉಚಿತ ತರಬೇತಿ

» ದಾವಣಗೆರೆ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಆಯೋಜಿಸಲಾಗಿರುವದ್ವಿಚಕ್ರವಾಹನರಿಪೇರಿಮತ್ತು ಸೇವೆ ಕುರಿತ 30 ದಿನಗಳ ಉಚಿತ ತರಬೇತಿಯನ್ನು ಆಗಸ್ಟ್ 4 ರಿಂದ ಹಮ್ಮಿಕೊಳ್ಳಲಾಗಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ಜುಲೈ 23 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9740982585, 9241482541, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.

### ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and machine learing ವೃತ್ತಿಪರ ತರಬೇತಿ ಕೋರ್ಸಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ, ತರಬೇತಿ ನೀಡುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 04 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸರ್ಕಾರದ ಆದೇಶದಂತೆ IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and machine learing ವೃತ್ತಿಪರ ತರಬೇತಿ ಕೋರ್ಸಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ರೂ.15,000/-ಗಳ ಶಿಷ್ಯವೇತನ ನೀಡಲಾಗುವುದು. ಶಿಷ್ಯವೇತನ, ತರಬೇತಿಗಾಗಿ ಅರ್ಜಿ ಸಲ್ಲಿಸುವ ಇಚ್ಛಿಸುವ ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇಯಿಂದ ಪಡೆದು ಅರ್ಜಿಯೊಂದಿಗೆ ಅರ್ಜಿದಾರರ ಆಧಾರ್ ಕಾರ್ಡ್, ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ಆಧಾಯ ಪ್ರಮಾಣ ಪತ್ರ, ಬಿ.ಇ/ಬಿ.ಟೆಕ್ ಪದವಿಯ ಅಂಕಪಟ್ಟಿ, ಘಟಿಕೋತ್ಸವ ಪ್ರಮಾಣ ಪತ್ರ ದಾಖಲೆಗಳನ್ನು ಲಗತ್ತಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-225427ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

### ಬೆಳೆ ಸಮೀಕ್ಷೆ: ಆ್ಯಪ್ ಮೂಲಕ ಬೆಳೆ ಮಾಹಿತಿ ರೈತರೇ ಅಪ್‌ಲೋಡ್ ಮಾಡಲು ಸೂಚನೆ



» ಚಿತ್ರದುರ್ಗ

ಜಿಲ್ಲೆಯಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮು ಬೆಳೆ ಸಮೀಕ್ಷೆಗೆ ರೈತರ ಆ್ಯಪ್ ಬಿಡುಗಡೆ ಮಾಡಲಾಗಿದ್ದು, ರೈತರು ಗೂಗಲ್ ಪ್ಲೇಸ್ಟೋರ್‌ನಿಂದ "ಋಚಿಡಿಮಿಜ ಅಡಿಠಿಠಿ ಖಣಡಿತಜಥಿ ಂಠಿಠಿ - 2025-26 (ಮುಂಗಾರು ರೈತರಬೆಳೆ ಸಮೀಕ್ಷೆ-2025)" ಎಂದು ಹುಡುಕಿ ಮೊಬೈಲ್ ಆ್ಯಪ್ ಡೌನ್‌ಲೋಡ್ ಮಾಡಿಕೊಂಡು ತಾವು ಬೆಳೆದ ಬೆಳೆ ಮಾಹಿತಿ ಹಾಗೂ ಛಾಯಚಿತ್ರ ಅಪ್‌ಲೋಡ್ ಮಾಡಬಹುದಾಗಿದೆ. ಈ ಮಾಹಿತಿಯನ್ನು ಬೆಳೆ ವಿಮೆ, ಬೆಳೆ ನಷ್ಟ ಪರಿಹಾರ, ಬೆಂಬಲ ಬೆಲೆ ಮತ್ತು ಸರ್ಕಾರದ ವಿವಿಧ ಯೋಜನೆಗಳಡಿ ಸವಲತ್ತುಗಳನ್ನು ಒದಗಿಸಲು ಪಹಣಿಯಲ್ಲಿ ಅಳವಡಿಸಲು ಬಳಸಲಾಗುತ್ತದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತಮ್ಮ ಜಮೀನಿನ ಬೆಳೆ ಮಾಹಿತಿಯನ್ನು ತಾವೇ ಖುದ್ದಾಗಿ ದಾಖಲಿಸಲು ಕೋರಿದೆ. ರೈತರು ಹತ್ತಿರದ ರೈತ ಸಂಪರ್ಕ ಕೇಂದ್ರ, ಗ್ರಾಮ ಲೆಕ್ಕಾಧಿಕಾರಿಗಳು ಅಥವಾ ಗ್ರಾಮಗಳಿಗೆ ನಿಯೋಜಿಸಿದ ಖಾಸಗಿ ನಿವಾಸಿಗಳ ಸಹಾಯದೊಂದಿಗೆ ಸಹ ಬೆಳೆ ಮಾಹಿತಿಯನ್ನು ದಾಖಲಿಸಬಹುದು. ಬೆಳೆ ವಿವರಗಳನ್ನು ದಾಖಲು ಮಾಡದಿದ್ದಲ್ಲಿ ಇಲಾಖೆಗಳಿಂದ ದೊರೆಯುವ ಸವಲತ್ತುಗಳಿಂದ ವಂಚಿತರಾಗುತ್ತೀರಿ. ಹೆಚ್ಚಿನ ಮಾಹಿತಿಗಾಗಿ ರೈತರು ಬೆಳೆ ಸಮೀಕ್ಷೆ ಸಹಾಯವಾಣಿ ಸಂಖ್ಯೆ 18004253553 ಗೆ ಕರೆ ಮಾಡಬಹುದು ಅಥವಾ ಸಂಬಂಧಪಟ್ಟ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿ/ರೈತ ಸಂಪರ್ಕ ಕೇಂದ್ರ, ಅಥವಾ ಗ್ರಾಮ ಲೆಕ್ಕಾಧಿಕಾರಿಗಳನ್ನು ಸಂಪರ್ಕಿಸಬಹುದು.

# ಇಂದು ಕೇವಲ ಒಳ್ಳೆಯದನ್ನು ನೆನಪಿಸಿಕೊಳ್ಳಬೇಕು ಎಂದು ನಿರ್ಧರಿಸಿದಾಗ ಕಂಡದ್ದು



ಪುಟ್ಟ ಕಂದ ಬೆಳಗಿನ ನಿದ್ರೆಯಿಂದ ಎದ್ದು ಕಣ್ಣು ಬಿಟ್ಟು ಪಕ್ಕದಲ್ಲಿ ಮಲಗಿದ್ದ ಅಮ್ಮನನ್ನು ತನ್ನ ಎರಡೂ ಕೈಗಳಿಂದ ಬಾಚಿತಬ್ಬಿ ಆಕೆಯ ಎದೆಯ ಮೇಲೆ ಮತ್ತೆ ಮಲಗಿದಾಗ ತಾಯಿ ತನ್ನೆಲ್ಲಾ ಅಕ್ಕರೆಯಿಂದ ಆಕೆಗೆ ಮುತ್ತಿಟ್ಟದ್ದು..........

ರಸ್ತೆ ದಾಟುತ್ತಿದ್ದ ಹಿರಿಯರೊಬ್ಬರು ಇದ್ದಕ್ಕಿದ್ದಂತೆ ತಲೆತಿರುಗಿ ಬಿದ್ದಾಗ ಅಲ್ಲಿಯೇ ಕಾಲೇಜಿಗೆ ಹೋಗುತ್ತಿದ್ದ ಹುಡಗನೊಬ್ಬ ತನ್ನ ಬ್ಯಾಗಿನಲ್ಲಿದ್ದ ನೀರಿನ ಬಾಟಲಿನಿಂದ ಮುಖದ ಮೇಲೆ ನೀರು ಚಿಮುಕಿಸಿ ಅವರನ್ನು ಎಚ್ಚರಿಸಿದಾಗ ಆ ಹಿರಿಯರು ಅವನನ್ನು ತಬ್ಬಿಕೊಂಡು ಕೃತಜ್ಞತೆ ಹೇಳಿದ್ದು......

ವ್ಯಕ್ತಿಯೊಬ್ಬ ಹೋಟೆಲಿನಲ್ಲಿ ಮಸಾಲೆ ದೋಸೆ ತಿನ್ನುತ್ತಿರುವಾಗ ಅಲ್ಲಿಗೆ ಭಿಕ್ಷೆ ಬೇಡುತ್ತಾ ಬಂದು ಅನಾಥನೊಬ್ಬ ಕೈ ಮುಗಿದು ಬೇಡಿದಾಗ ಆ ವ್ಯಕ್ತಿ ಅವನಿಗೆ ಒಂದು ಬೆಣ್ಣೆ ಮಸಾಲೆ ಪಾರ್ಸಲ್ ಕೊಡಿಸಿದಾಗ ಆ ಭಿಕ್ಷುಕನ ಕಣ್ಣುಗಳಲ್ಲಿ ಹೊಳೆದ ಆಸೆಯ ಹೊಳಪನ್ನು ಕಂಡದ್ದು..........

ಅಪಘಾತವಾಗಿ ಪ್ರಜ್ಞೆ ತಪ್ಪಿದ್ದ ವ್ಯಕ್ತಿಗೆ ಮತ್ತೆ ಪ್ರಜ್ಞೆ ಮರಳಿದಾಗ ಡಾಕ್ಟರ್ ಪಕ್ಕದಲ್ಲಿದ್ದ ಒಬ್ಬ ವ್ಯಕ್ತಿಯನ್ನು ತೋರಿಸಿ ಇವರು ನಿಮ್ಮನ್ನು ಸಕಾಲಕ್ಕೆ ಆಸ್ಪತ್ರೆಗೆ ಸೇರಿಸಿದ್ದರಿಂದಲೇ ನಿಮ್ಮ ಪ್ರಾಣ ಉಳಿಯಿತು ಎಂದು ಅಪರಿಚಿತರನ್ನು ಪರಿಚಯಿಸಿದಾಗ ಗಾಯಗೊಂಡ ವ್ಯಕ್ತಿಯ ಮುಖದಲ್ಲಿ ಮೂಡಿದ ಭಾವನೆ ಮತ್ತು ಆ ಅಪರಿಚಿತರ ಮನದಲ್ಲಿ ಆದ ತೃಪ್ತಿಯ ಭಾವ ಕಂಡದ್ದು....



ಕಾಲೇಜಿನ ಕ್ಯಾಂಪಸ್‌ನಲ್ಲಿ ಏನೋ ಕಾರಣದಿಂದ ಅಳುತ್ತಿದ್ದ ಹುಡುಗಿಯನ್ನು ಎದೆಗವುಚಿಕೊಂಡು ಸಂತೈಸುತ್ತಿದ್ದ ಹುಡುಗನ ಕಣ್ಣಲ್ಲೂ ಪ್ರೀತಿಯ ಹನಿಯುದುರುವುದನ್ನು ನೋಡಿದಾಗ......

ಮೊದಲ ಬಾರಿಗೆ ಯಾವುದೋ ಒಂದು ಕ್ರಿಕೆಟ್ ಪಂದ್ಯದಲ್ಲಿ ತಮ್ಮ ಮೊಮ್ಮಗ ಶತಕದ ರನ್ನು ಹೊಡೆದ ಸಾಧನೆಯನ್ನು ಟಿವಿಯಲ್ಲಿ ನೋಡುತ್ತಿದ್ದ ಅಜ್ಜ ಅಜ್ಜಿ ಮತ್ತು ಕುಟುಂಬದವರು ಏಕದಂ ಆಕಾಶಕ್ಕೆ ನೆಗೆದು ಸಂತೋಷದಿಂದ ಕೂಗಿದ ಘಟನೆಯನ್ನು ವೀಕ್ಷಿಸಿದಾಗ........

ಕೆಲವು ವರುಷಗಳ ಶ್ರಮದ ನಂತರ ಉಪಗ್ರಹವೊಂದು ಯಶಸ್ವಿಯಾಗಿ ಉಡಾವಣೆಯಾದ ಸಂದರ್ಭದಲ್ಲಿ ತಾಯಿ ಮಗುವನ್ನು ಹೆಡದ ನಂತರದ ರೀತಿಯಲ್ಲಿ ಸಂಭ್ರಮಿಸಿದ ವಿಜ್ಞಾನಿಗಳ ಹರ್ಷೋದ್ಗಾರಗಳನ್ನು ಕಂಡಾಗ.....

ಮಧ್ಯ ವಯಸ್ಕ ಹೆಣ್ಣೊಂದು ತನ್ನ ಸಾಕು ಬೆಕ್ಕಿನ ಜೊತೆ ತನ್ನೆಲ್ಲಾ ನೋವು ಮರೆಯುತ್ತಾ, ನಲಿದಾಡುತ್ತಾ ಮಗುವಿನಂತೆ ಕುಣಿದಾಡುವುದನ್ನು ಕಂಡಾಗ.........

ಪುಟ್ಟ ಮಗುವೊಂದು ಮನೆಯ ಹಜಾರದಲ್ಲಿ ಎಲ್ಲರ ಮುಂದೆ ತೊದಲುತ್ತಾ ಮೊದಲ ಬಾರಿಗೆ ಅಪ್ಪಾ ಎಂದು ಕರೆದಾಗ ಆ ಅಪ್ಪನ ಮುಖದಲ್ಲಿ ಮೂಡಿದ ಆ ಅಭಿಮಾನದ ಧನ್ಯತಾ ಖುಷಿಯ ಭಾವ.....

ಹೀಗೆ ಸದಾ ಒಳ್ಳೆಯ ಘಟನೆಗಳೇ ನಮ್ಮ ಸುತ್ತ ಮುತ್ತ ಘಟಿಸುತ್ತಿರಲಿ ಎಂದು ಆಶಿಸುತ್ತಾ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ - ಮನೆಗಳಲ್ಲಿ - ಮತಗಳಲ್ಲಿ - ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

## ಮಾಧ್ಯಮಗಳು ನನ್ನನ್ನೂ ಸೇರಿ ಅಧಿಕಾರಸ್ಥರ ಓಲೈಕೆ ಮಾಡಬಾರದು

# ಊಹಾ ಪತ್ರಿಕೋದ್ಯಮ ಸಮಾಜಕ್ಕೆ ಅಪಾಯ

### ನಿಜ ಸುದ್ದಿಗಾಗಿ ಹೋರಾಟ ನಡೆಸುವ ಸಂದರ್ಭ ಬಂದಿದೆ ಎಂದರೆ, ಸುಳ್ಳು ಸುದ್ದಿಗಳು ಹೆಚ್ಚಾಗಿವೆ ಅಂಥ ತಾನೇ ಅರ್ಥ: ಸಿ.ಎಂ ಪ್ರಶ್ನೆ




» ಬೆಂಗಳೂರು

ನಿಜ ಸುದ್ದಿಗಾಗಿ ಹೋರಾಟ ನಡೆಸುವ ಸಂದರ್ಭ ಬಂದಿದೆ ಎಂದರೆ, ಸುಳ್ಳು ಸುದ್ದಿಗಳು ಹೆಚ್ಚಾಗಿವೆ ಅಂಥ ತಾನೇ ಅರ್ಥ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ, ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತಾಶ್ರಯದಲ್ಲಿ ನಡೆದ "ಪತ್ರಿಕಾ ದಿನಾಚರಣೆ-2025" ಹಾಗೂ "ನಿಜ ಸುದ್ದಿಗಾಗಿ ಸಮರ" ಸಂವಾದವನ್ನು ಉದ್ಘಾಟಿಸಿ, ಪತ್ರಕರ್ತರ ಉಚಿತ ಬಸ್ ಪಾಸ್ ಮತ್ತು ಪತ್ರಕರ್ತರ ಆರೋಗ್ಯ ಸಂಜೀವಿನಿ ಯೋಜನೆಯನ್ನು ಉದ್ಘಾಟಿಸಿ ಮಾತನಾಡಿದರು.ಊಹಾ ಪತ್ರಿಕೋದ್ಯಮ ಪತ್ರಿಕೋದ್ಯಮಕ್ಕೆ ಮತ್ತು ಸಮಾಜಕ್ಕೂ ಅಪಾಯ. ಸುಳ್ಳು ಮತ್ತು ಊಹಾ ಪತ್ರಿಕೋದ್ಯಮ ಮಾಧ್ಯಮ ಸ್ವತಂತ್ರವಾಗಿ, ನಿರ್ಭೀತಿಯಿಂದ ಸುದ್ದಿ ಮಾಡಬೇಕು ಎನ್ನುವುದರಲ್ಲಿ ನಂಬಿಕೆ ಇಟ್ಟುಕೊಂಡಿರುವವನು ನಾನು. ಜವಾಹರಲಾಲ್ ನೆಹರೂ ಅವರೂ ಇದನ್ನೇ ನಂಬಿದ್ದರು ಮತ್ತು ಪಾಲಿಸಿದ್ದರು. ಯಾವುದೇ ಚಾನಲ್‌ಗಳು ನನ್ನ ಬಗ್ಗೆ ಎಷ್ಟು ಸುಳ್ಳು ಹೇಳಿದರೂ ನಾನು ಯಾರಿಗೂ ಫೋನ್ ಕೂಡ ಮಾಡುವುದಿಲ್ಲ ಎಂದರು.

ನನ್ನ ಕಾರಿನ ಮೇಲೆ ಕಾಗೆ ಕೂತಿದ್ದನ್ನು ಚರ್ಚೆ ನಡೆಸಿ ಮೂಢನಂಬಿಕೆ ಬಿತ್ತುವುದನ್ನು ಪತ್ರಿಕಾವೃತ್ತಿ ಎಂದು ಕರೆಯಬೇಕಾ ? ಜನರನ್ನು ಮೌಢ್ಯಕ್ಕೆ ತಳ್ಳುವುದು ಪತ್ರಿಕಾ ವೃತ್ತಿಯಾ ಎಂದು ಪ್ರಶ್ನಿಸಿದರು. ನಾನು ಇವತ್ತು ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಮತ್ತು ಆರೋಗ್ಯ ಸಂಜೀವಿನಿ ಉದ್ಘಾಟಿಸಿ ಪತ್ರಕರ್ತರಿಗೆ ಅನುಕೂಲ ಒದಗಿಸಿದ್ದೇವೆ. ನಮ್ಮ ಪರವಾಗಿ ಬರೆಯಲಿ ಎನ್ನುವ ಕಾರಣದಿಂದ ಜಾರಿ ಮಾಡಿರುವುದಲ್ಲ. ಸತ್ಯ ಬರೆಯಿರಿ, ಜನರ ಪರವಾಗಿ, ಪ್ರಜಾಪ್ರಭುತ್ವದ ಪರವಾಗಿ ಇರಿ ಎಂದು ಕರೆ ನೀಡಿದರು.

### ಭಾಷಣದ ಹೈಲೈಟ್ಸ್..

- ಸ್ವಾತಂತ್ರ್ಯಪೂರ್ವದಲ್ಲಿ ಜನರನ್ನು ಎಚ್ಚರಿಸುವ, ಸ್ವಾತಂತ್ರ್ಯ ಹೋರಾಟದ ಪರವಾಗಿ ಪತ್ರಿಕೆಗಳು ಕೆಲಸ ಮಾಡಿದ್ದವು.
- ಸಂವಿಧಾನದ ಮೌಲ್ಯಗಳು ಮತ್ತು ಸತ್ಯವನ್ನು ಮರೆಮಾಚುವ ಕೆಲಸ ಆಗಬಾರದು.
- ದ್ವೇಷದ, ಪ್ರೀತಿಯಿಲ್ಲದ ಸಮಾಜ ಸೃಷ್ಟಿಸುವ ಪ್ರಯತ್ನಕ್ಕೆ ಮಾಧ್ಯಮಗಳು ಬೆಂಬಲಿಸಬಾರದು.
- ನನ್ನ ಮಾತುಗಳನ್ನು ಕೇವಲ ಪಕ್ಷದ ಚೌಕಟ್ಟಿನಲ್ಲಿ ಮಾತ್ರ ನೋಡದೆ ಸಮಾಜ ಮುಖಿಯಾಗಿ ಕೂಡ ನೋಡಬೇಕು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T